ಸಂಪುಟ : 10 ಸಂಚಿಕೆ: 91 ಪುಟ : 4+2 ಬೆಲೆ: 3.00 ಶನಿವಾರ ಮೇ 10 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 91 Pages : 4+2 Price : 3.00 Saturday May 10 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಮನ್ವಯದೊಂದಿಗೆ ಸಂದಿಗ್ಧ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಜಿಲ್ಲಾಧಿಕಾರಿ ಸೂಚನೆ

# ಯುದ್ಧ ಪರಿಸ್ಥಿತಿ ನಿರ್ವಹಣೆಗೆ ಸನ್ನದ್ಧರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿ ಯುದ್ಧದ ಸನ್ನಿವೇಶ ಇರುವುದರಿಂದ ಅಧಿಕಾರಿಗಳು ಯುದ್ಧ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಸರ್ವ ಸನ್ನದ್ಧರಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತುರ್ತು ಮುಂಜಾಗ್ರತಾ ಕ್ರಮಗಳ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿ ಹಾಗೂ ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದು ಪರಿಸ್ಥಿತಿಗನುಗುಣವಾಗಿ ಜವಾಬ್ದಾರಿಯುತವಾಗಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಪ್ರಮುಖ ಸ್ಥಳಗಳು, ದೇವಾಲಯ, ಮಸೀದಿ, ಚರ್ಚ್, ಜನಸಂದಣಿ ಇರುವ ಪ್ರದೇಶಗಳಲ್ಲಿ ಒಂದು ವೇಳೆ ಅಹಿತಕರ ಘಟನೆ ನಡೆದರೆ ಪೂರ್ವ ತಯಾರಿಯಾಗಿ ಸಾರ್ವಜನಿಕರ ರಕ್ಷಣಾ ಕಾರ್ಯದ ಕಡೆ ನಿಗಾ ವಹಿಸಬೇಕು. ತಾಲೂಕು ಮಟ್ಟದಲ್ಲಿಯೂ ಸಹ ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯ ಸಮನ್ವಯತೆಯಲ್ಲಿ ಮುಂಜಾಗ್ರತಾ ಕ್ರಮಗಳ ಕುರಿತು ಸಭೆ ಜರುಗಿಸಬೇಕು ಎಂದು ಸೂಚಿಸಿದರು.



> ನಿವೃತ್ತ ಸೈನಿಕರಿಗೂ ಸಹ ಪ್ರತ್ಯೇಕ ಜವಾಬ್ದಾರಿಯನ್ನು ಕೊಡಲಾಗುತ್ತದೆ. ಜಿಲ್ಲೆಯಲ್ಲಿನ ಹಾಸ್ಟೆಲ್‌ಗಳ ರಕ್ಷಣೆ ಕಡೆ ನಿಗಾ ವಹಿಸಬೇಕು. ತಾಲೂಕು ಮಟ್ಟದಲ್ಲಿಯೂ ಸಭೆ ನಡೆಸಿ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಮಾಕ್ ಡ್ರಿಲ್ ಕಾರ್ಯಕ್ರಮ ಕೈಗೊಳ್ಳಬೇಕು. ಎನ್.ಸಿ.ಸಿ., ಎನ್.ಎಸ್.ಎಸ್ ವಿದ್ಯಾರ್ಥಿಗಳ ಸಂಘಟನೆಯೊಂದಿಗೆ ನಾಗರಿಕರಲ್ಲಿ ಆತ್ಮವಿಶ್ವಾಸ ತುಂಬುವ ಕಾರ್ಯವಾಗಬೇಕು. ಜಿಲ್ಲೆಯಲ್ಲಿನ ಜಲ ಸ್ಥಾವರಗಳು, ಶಾಪಿಂಗ್ ಮಾಲ್, ಆಸ್ಪತ್ರೆ, ಕೈಗಾರಿಕೆ, ಧಾರ್ಮಿಕ ಕೇಂದ್ರಗಳು, ಜನಸಂದಣಿ ಇರುವ ಪ್ರಮುಖ ಸ್ಥಳಗಳಲ್ಲಿ ರಕ್ಷಣಾ ಕಾರ್ಯದ ಕುರಿತು ನಿಗಾ ವಹಿಸಬೇಕು.
>
> – ಬಿ.ಎಸ್. ನೇಮಗೌಡ.
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಜಿಲ್ಲಾಡಳಿತದೊಂದಿಗೆ ತುರ್ತು ಪರಿಸ್ಥಿತಿಯಲ್ಲಿ ವಿವಿಧ ಇಲಾಖೆಗಳಿಗೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಹಂಚಿಕೆಯನ್ನು ಮಾಡಲಾಗಿದೆ. ಮಾಜಿ ಸೈನಿಕರು, ಎನ್‌ಸಿಸಿ, ಎನ್‌ಎಸ್‌ಎಸ್, ಪೊಲೀಸ್ ಇಲಾಖೆಯವರು ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ಯಾವುದೇ ಕಾರಣಕ್ಕೂ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಬಾರದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಯುದ್ಧದ ಸನ್ನಿವೇಶದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಮಾರ್ಗಸೂಚಿಗಳ ಪಾಲನೆ ಅವಶ್ಯವಾಗಿದೆ. ಆರೋಗ್ಯ ಇಲಾಖೆಯವರು ತುರ್ತು ಪರಿಸ್ಥಿತಿಯಲ್ಲಿ ಸಾರ್ವಜನಿಕರಿಗೆ ಚಿಕಿತ್ಸೆ ನೀಡಲು ಆಸ್ಪತ್ರೆಗಳಲ್ಲಿ ಔಷಧಿಗಳ ಸರಬರಾಜು, ವೈದ್ಯಕೀಯ ಸೇವೆ, ಆಕ್ಸಿಜನ್, ಆಂಬ್ಯುಲನ್ಸ್‌ಗಳ ಸಿದ್ಧತೆ ಮಾಡಿಟ್ಟುಕೊಳ್ಳಬೇಕು. ಅಗತ್ಯಕ್ಕನುಗುಣವಾಗಿ ಸಾರ್ವಜನಿಕರ ರಕ್ಷಣೆಗಾಗಿ ಅಗ್ನಿ ಶಾಮಕ, ಕಂದಾಯ, ಯುವಜನ ಸೇವೆ, ಲೋಕೋಪಯೋಗಿ, ಅಹಾರ, ಶಿಕ್ಷಣ, ಸಾರಿಗೆ, ಹೆಸ್ಕಾಂ, ಪೊಲೀಸ್ ಇಲಾಖೆಯವರು ಕಾರ್ಯನಿರ್ವಹಣೆಗೆ ಪೂರ್ವ ತಯಾರಿ ಮಾಡಿಟ್ಟುಕೊಳ್ಳಬೇಕು ಎಂದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಯುದ್ಧ ನಡೆದಾಗ ಜಿಲ್ಲಾಡಳಿತ ನೀಡುವ ಮಾರ್ಗಸೂಚಿಗಳನ್ನು ಪಾಲಿಸಬೇಕು. ದೇಶದಲ್ಲಿ ಯುದ್ಧದ ಸನ್ನಿವೇಶ ಇರುವುದರಿಂದ ತುರ್ತು ಪರಿಸ್ಥಿತಿಯಲ್ಲಿ ನಾಗರಿಕರ ರಕ್ಷಣೆಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೇ ಕೆಲಸ ನಿರ್ವಹಿಸಬೇಕು. ಏನಾದರೂ ಸಮಸ್ಯೆ ಉಂಟಾದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿಯೊಂದಿಗೆ ನೇರ ಸಂಪರ್ಕದಲ್ಲಿರಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

▶▶ 3ನೇ ಪುಟಕ್ಕೆ

## ಪರಿಶಿಷ್ಟ ಜಾತಿ ಉಪವರ್ಗೀಕರಣ (ಒಳಮಿಸಲಾತಿ) ಸಮೀಕ್ಷೆ

# ಲೋಪದೋಷಗಳನ್ನು ಸರಿಪಡಿಸುವಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಗೋರ್ ಸೇನಾ ಸಂಘಟನೆಯ ಗದಗ ಘಟಕದ ವತಿಯಿಂದ ಪರಿಶಿಷ್ಟ ಜಾತಿ ಉಪವರ್ಗೀಕರಣ (ಒಳಮಿಸಲಾತಿ) ಸಮೀಕ್ಷೆಯ ಲೋಪದೋಷಗಳನ್ನು ಸರಿಪಡಿಸುವಂತೆ ಸಮಿತಿಯ ರಾಜ್ಯ ಕಾರ್ಯದರ್ಶಿ ರವಿಕಾಂತ ಅಂಗಡಿ ನೇತೃತ್ವದಲ್ಲಿ ಶುಕ್ರವಾರ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ರವಿಕಾಂತ ಅಂಗಡಿ, ನ್ಯಾಯಮೂರ್ತಿ ನಾಗಮೋಹನದಾಸರವರ ವರದಿಯನ್ನು ಆಧರಿಸಿ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿಗಳ ಒಳಮಿಸಲಾತಿಗಾಗಿ ರಾಜ್ಯಾದ್ಯಂತ ಸಮೀಕ್ಷೆ ಕೈಗೊಂಡಿದ್ದು, ಈ ಸಮೀಕ್ಷೆಯಲ್ಲಿ ಹಲವಾರು ಸಮಸ್ಯೆಗಳು ಉಂಟಾಗಿರುವುದಾಗಿ ತಿಳಿಸಿದ್ದಾರೆ.

ಸಮೀಕ್ಷೆಯಲ್ಲಿ ರೇಷನ್ ಕಾರ್ಡ್‌ನಲ್ಲಿ ಹೆಸರು ಇಲ್ಲದಿದ್ದರೆ, ಕೇವಲ ಆಧಾರ್ ಕಾರ್ಡ್ ಹೊಂದಿರುವ ಕುಟುಂಬದ ಇಬ್ಬರು ಸದಸ್ಯರನ್ನು ಮಾತ್ರ ಸೇರಿಸಬಹುದಾಗಿದೆ.



ಆದರೆ, ಇದರಿಂದ ಹಲವಾರು ಕುಟುಂಬದ ಸದಸ್ಯರು ಸಮೀಕ್ಷೆಯಿಂದ ಹೊರಗುಳಿಯುವ ಸಂಭವವಿದೆ. ಚುನಾವಣಾ ಗುರುತಿನ ಚೀಟಿ, ಪ್ಯಾನ್ ಕಾರ್ಡ್, ಜನ್ಮ ಪ್ರಮಾಣಪತ್ರ, ನಿವಾಸ ಪ್ರಮಾಣಪತ್ರ, ಡ್ರೈವಿಂಗ್ ಲೈಸೆನ್ಸ್, ಶಾಲಾ ದೃಢೀಕರಣ ಪತ್ರಗಳಂತಹ ದಾಖಲೆಗಳ ಆಧಾರದಿಂದ ಅಧಿಕ ಸದಸ್ಯರನ್ನು ಸೇರಿಸಲು ಅವಕಾಶ ನೀಡಬೇಕೆಂದು ಅವರು ಒತ್ತಾಯಿಸಿದರು.


ಸರ್ಕಾರಿ ಉದ್ಯೋಗಿಗಳ ಕುಟುಂಬಗಳಲ್ಲಿ ರೇಷನ್ ಕಾರ್ಡ್ ಇಲ್ಲದ ಹಲವಾರು ಸದಸ್ಯರಿದ್ದು, ಕೇವಲ ಆಧಾರ್ ಆಧಾರಿತವಾಗಿ ಇಬ್ಬರನ್ನು ಮಾತ್ರ ಸೇರಿಸುವ ವ್ಯವಸ್ಥೆ ಅನ್ಯಾಯವಾಗಿದೆ. ಈ ಬಗ್ಗೆ ತಕ್ಷಣ ಕ್ರಮ ತೆಗೆದುಕೊಳ್ಳಬೇಕು. ಕೆಲವು ಹಳ್ಳಿ, ಹಟ್ಟಿ, ತಾಂಡಾಗಳಲ್ಲಿ ಇಂಟರ್ನೆಟ್ ಸಂಪರ್ಕದ ಕೊರತೆಯಿಂದ ಸಮೀಕ್ಷೆ ಪ್ರಾರಂಭವಾಗಿಲ್ಲ. ಕೆಲವರು ಪ್ರಾಮಾಣಿಕತೆಯ ಕೊರತೆಯಿಂದ ಸಮೀಕ್ಷೆಯನ್ನು ಸರಿಯಾಗಿ ನಡೆಸುತ್ತಿಲ್ಲ. ಅಂತಹ ಸಿಬ್ಬಂದಿಯನ್ನು ಬೇಗನೆ ಬದಲಾಯಿಸಬೇಕು ಮತ್ತು ಸಮರ್ಪಕ ಹಾಗೂ ನಿಷ್ಠೆಯ ಸಮೀಕ್ಷೆಗೆ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದರು.

> ಲಿಂಗಸುಗೂರು ತಾಲೂಕಿನ ಹೆಗ್ಗಪುರ ತಾಂಡಾದಲ್ಲಿ ಬಂಜಾರ/ಲಂಬಾಣಿ ಸಮುದಾಯದವರನ್ನು 'ಆದಿ ದ್ರಾವಿಡ', 'ಆದಿ ಆಂಧ್ರ' ಎಂಬಂತೆ ತಪ್ಪಾಗಿ ದಾಖಲಿಸಲಾಗಿದ್ದು, ಇದನ್ನು ತಕ್ಷಣ ಸರಿಪಡಿಸಬೇಕು ಮತ್ತು ತಪ್ಪು ಮಾಡಿದ ಸಿಬ್ಬಂದಿ ಸೋಮಪ್ಪ ಎಂಬುವರ ಮೇಲೆ ಕಾನೂನು ಕ್ರಮ ಜರುಗಿಸಿ, ಅಲ್ಲಿ ಮತ್ತೊಮ್ಮೆ ಸಮೀಕ್ಷೆ ನಡೆಸಬೇಕು ಎಂದು ರವಿಕಾಂತ ಅಂಗಡಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪಾಂಡು ಚವ್ಹಾಣ, ಧನಸಿಂಗ್ ನಾಯಕ, ಕುಬೇರಪ್ಪ ಪವಾರ, ಲೋಕೇಶ್ ಕಟ್ಟಿಮಣಿ, ವಿಠ್ಠಲ ತೋಟದ, ಮೋತಿಲಾಲ್ ಮಾಳಗಿಮಣಿ, ವೆಂಕಟೇಶ್ ನಾಯಕ, ಸೋಮಪ್ಪ ಲಮಾಣಿ, ತಾವರೆಪ್ಪ ಲಮಾಣಿ, ರಾಜು ಪವಾರ, ರವಿ ನಾಯಕ, ಕವಿತಾ ತೋಟದ ಸೇರಿದಂತೆ ಸಮುದಾಯದ ಪ್ರಮುಖರು ಉಪಸ್ಥಿತರಿದ್ದರು.

## ಸಚಿವ ಎಚ್.ಕೆ. ಪಾಟೀಲರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಮೇ. 10ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಮೇ 10ರಂದು ಬೆಳಿಗ್ಗೆ 6 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಹೊರಟು ಬೆಳಿಗ್ಗೆ 6.30 ಗಂಟೆಗೆ ಗದುಗಿಗೆ ಆಗಮಿಸುವರು. ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್. ಪಾಟೀಲ ಸ್ಟೇಡಿಯಂ ಹತ್ತಿರ ವಿದ್ಯಾನಗರದ ಮಂಗಳಾ ಬಚಪನ್ ಪ್ಲೇಸ್ಕೂಲ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 11 ಗಂಟೆಗೆ ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ರಸ್ತೆ ಮೂಲಕ ಬನಶಂಕರಿಗೆ ಪ್ರಯಾಣ ಮಾಡುವರು. ಮಧ್ಯಾಹ್ನ 3 ಗಂಟೆಗೆ ಬನಶಂಕರಿಯಿಂದ ಗದುಗಿಗೆ ಆಗಮಿಸಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಚಿತ್ರ ಅಂಚೆ ಪತ್ರ ಬಿಡುಗಡೆ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿಯಲ್ಲಿ ಮೇ. 13ರಂದು ಬೆಳಿಗ್ಗೆ 10 ಗಂಟೆಗೆ ಬ್ರಹ್ಮ ಜಿನಾಲಯ ದೇವಸ್ಥಾನದ ಶಾಶ್ವತ ಚಿತ್ರಾತ್ಮಕ ಮುದ್ರೆ ಹಾಗೂ ಚಿತ್ರ ಅಂಚೆ ಪತ್ರ ಬಿಡುಗಡೆ ಕಾರ್ಯಕ್ರಮ ನಡೆಯಲಿದೆ.

ಭಾರತ ಸರಕಾರದ ಸಂಪರ್ಕ, ಮಾಹಿತಿ, ಸಂವಹನ ಸಚಿವಾಲಯ, ಭಾರತೀಯ ಅಂಚೆ ಇಲಾಖೆ ಹಾಗೂ ಗದಗ ವಿಭಾಗೀಯ ಅಂಚೆ ಅಧೀಕ್ಷಕರ ಕಚೇರಿ ಇವುಗಳ ಆಶ್ರಯದಲ್ಲಿ ಕರ್ನಾಟಕದ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು, ಐತಿಹಾಸಿಕ ಕುರುಹುಗಳನ್ನು ಪ್ರಚಾರದೊಂದಿಗೆ ಪರಿಚಯಿಸಲಾಗುತ್ತಿದೆ.

ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಎಸ್.ರಾಜೇಂದ್ರಕುಮಾರ್, ಉತ್ತರ ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಸುಶೀಲ್ ಕುಮಾರ, ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಜಯದೇವ ಕಡಗಿ, ರಾಜ್ಯದ ವಿವಿಧ ಭಾಗದ ಅಂಚೆ ಚೀಟಿ ಸಂಗ್ರಾಹಕರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಭಾರತೀಯ ಸೈನಿಕರ ಕಾರ್ಯಕ್ಕೆ ಮೆಚ್ಚುಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕ್ಲಾಥ್ ಮರ್ಚಂಟ್ಸ್ ಅಸೋಸಿಯೇಶನ್‌ನಲ್ಲಿ ನಡೆದ ಸಭೆಯಲ್ಲಿ ಅಸೋಸಿಯೇಶನ್ ಅಧ್ಯಕ್ಷ ಸುರೇಶ ಬನ್ನಾಲಿ ಅವರು ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಭಾರತೀಯ ಸೈನಿಕರ ಹೋರಾಟಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

▶▶ 3ನೇ ಪುಟಕ್ಕೆ

## 'ಸಂಗೀತ ಸುಧೆ' ಕಾರ್ಯಕ್ರಮ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತರತ್ನ ಪಂ. ಭೀಮಸೇನ್ ಜೋಶಿ ಪ್ರತಿಷ್ಠಾನದ ವತಿಯಿಂದ ಸಂಗೀತ ಸುಧೆ ಕಾರ್ಯಕ್ರಮವನ್ನು 11ರಂದು ಸಾಯಂಕಾಲ 6 ಗಂಟೆಗೆ ಬೆಟಗೇರಿಯ ಹೆಲ್ತ ಕ್ಯಾಂಪ್‌ನಲ್ಲಿರುವ ಚಿದಂಬರ ಆಶ್ರಮದಲ್ಲಿ ನೆರವೇರಲಿದೆ.

ಸಾಯಂಕಾಲ 6ರಿಂದ 7 ಗಂಟೆಯವರೆಗೆ ಧಾರವಾಡದ ಆಕಾಶವಾಣಿ ಕಲಾವಿದೆ ಭಾಗ್ಯಶ್ರೀ ಹೂಗಾರರಿಂದ ಸಿತಾರ ವಾದನ ಜರುಗುವುದು. ರಘುನಂದನ ಹೂಗಾರ ತಬಲಾ ಸಾಥ್ ನೀಡುವರು. ಸಾಯಂಕಾಲ 7ರಿಂದ 9 ಗಂಟೆಯವರೆಗೆ ಭಾರತರತ್ನ ಪಂ. ಭೀಮಸೇನ್ ಜೋಶಿ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ಪಂಡಿತ್ ಭೀಮಸೇನ್ ಜೋಶಿಯವರ ನೇರ ಶಿಷ್ಯರಾದ ಪಂಡಿತ್ ಅರವಿಂದ ಹುಯಿಲಗೋಳಕರ್ ಶಾಸ್ತ್ರೀಯ ಸಂಗೀತ, ದಾಸವಾಣಿ ಹಾಗೂ ಭಜನ್ ಕಾರ್ಯಕ್ರಮ ನಡೆಸಿಕೊಡುವರು. ವೆಂಕಟೇಶ ಜೋಶಿ ತಬಲಾ, ಶ್ರೀಕಾಂತ್ ಹೂಲಿ ಸಂವಾದಿನಿ ಹಾಗೂ ವಿಠ್ಠಲ ಕಟ್ಟಿ ತಾಳ ಸಾಥ್ ನೀಡುವರು.

ಕಾರ್ಯಕ್ರಮದ ಆತಿಥ್ಯವನ್ನು ಪ್ರತಿಷ್ಠಾನದ ಕಾರ್ಯಕಾರಿ ಮಂಡಳಿ ಸದಸ್ಯರಾದ ಅರುಣ ರಾಜಪುರೋಹಿತ ಕುಟುಂಬವರ್ಗದವರು ವಹಿಸಿಕೊಂಡಿದ್ದು, ಪ್ರತಿಷ್ಠಾನದ ಪದಾಧಿಕಾರಿಗಳು ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಬಿಜೆಪಿ ಯುವ ಮೋರ್ಚಾದಿಂದ ವಿಶೇಷ ಪೂಜೆ



■ ವಿಜಯಸಾಕ್ಷಿ ಸುದ್ದಿ, ಗದಗ

'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ಭಾಗಿಯಾಗಿರುವ ನಮ್ಮ ವೀರ ಸೈನಿಕರಿಗೆ ಹಾಗೂ ಪ್ರಧಾನಮಂತ್ರಿ ಮೋದಿಯವರಿಗೆ ಭಗವಂತ ಇನ್ನಷ್ಟು ಶಕ್ತಿಯನ್ನು ನೀಡಲಿ ಎಂದು ಪ್ರಾರ್ಥಿಸಿ ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಬಿಜೆಪಿ ಯುವ ಮೋರ್ಚಾ ವತಿಯಿಂದ ವಿಶೇಷ ಪೂಜೆ ಸಲ್ಲಿಸಲಾಯಿತು.

ಪ್ರಮುಖರಾದ ಸಂತೋಷ ಅಕ್ಕಿ, ಅನಿಲ್ ಅಬ್ಬಿಗೇರಿ, ಬಸವರಾಜ ನರೇಗಲ್, ಕಾರ್ತಿಕ್ ಶಿಗ್ಲಿಮಠ್, ವಿನಾಯಕ ಹೊರಕೇರಿ ಸೇರಿದಂತೆ ಯುವ ಮೋರ್ಚಾ ಕಾರ್ಯಕರ್ತರು ಉಪಸ್ಥಿತರಿದ್ದರು.

## ಗ್ರಾಮೀಣ ವಿ.ವಿ ಗೋಶಾಲೆ ಕಾಮಗಾರಿ ಪರಿಶೀಲನೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿವಿಧ ಯೋಜನೆಗಳ ಅನುದಾನದಲ್ಲಿ ತಾಲೂಕಿನ ನಾಗಾವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿದ ಕಾಮಗಾರಿಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಶುಕ್ರವಾರ ಪರಿಶೀಲಿಸಿದರು.

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ತಾಲೂಕಿನ ನಾಗಾವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಆವರಣದಲ್ಲಿ ನಿರ್ಮಿಸಲಾದ ಗೋಶಾಲೆ ಕಾಮಗಾರಿ ವೀಕ್ಷಿಸಿದರು. ದಿ. ವಿ.ಎಸ್. ಚಿಂಚಲಿ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯ ಆಟದ ಮೈದಾನ ಮತ್ತು ಅಡುಗೆ ಕೋಣೆ ಕಾಮಗಾರಿ ವೀಕ್ಷಿಸಿ, ಕಡತಗಳನ್ನು ಪರಿಶೀಲಿಸಿದರು. ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ತೆರಳಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು ಇರುವ ಬಗ್ಗೆ ವಿಚಾರಿಸಿ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಡಿಡಿಪಿಐ ಆರ್.ಎಸ್. ಬುರಡಿ, ಗದಗ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ (ಉಖಾ) ಕುಮಾರ ಪೂಜಾರ, ಗದಗ ಗ್ರಾಮೀಣ ಬಿಇಒ ವಿ.ವಿ. ನಡುವಿನಮನಿ, ಡಿವೈಪಿಸಿ ಎಂ.ಎಚ್. ಕಂಬಳಿ, ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಜಯಶ್ರೀ ಏಕಬೋಟೆ, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಗೂಲಪ್ಪನವರ, ಗ್ರಾ.ಪಂ ಎಸ್‌ಡಿಎ ಗಣೇಶ ಪೂಜಾರ, ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ, ತಾಂತ್ರಿಕ ಸಹಾಯಕ ಅಜಯ ಅಬ್ಬಿಗೇರಿ, ಬಿಎಫ್‌ಟಿ ದುರ್ಗಪ್ಪ ಆಲೂರ, ಪಂಚಾಯಿತಿ ಸಿಬ್ಬಂದಿ ಹಾಗೂ ಇತರರಿದ್ದರು.

## 138 ವಿಮಾನ ಹಾರಾಟ ರದ್ದು

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತ–ಪಾಕಿಸ್ತಾನದ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆ ಭದ್ರತಾ ದೃಷ್ಟಿಯಿಂದ ದೇಶದ ಹಲವಡೆ ವಿಮಾನ ನಿಲ್ದಾಣಗಳನ್ನು ಬಂದ್ ಮಾಡಲಾಗಿದೆ. ದೆಹಲಿಯಲ್ಲಿ 100ಕ್ಕೂ ಹೆಚ್ಚು ವಿಮಾನಗಳ ಹಾರಾಟವನ್ನು ರದ್ದುಪಡಿಸಲಾಗಿದೆ. ಪೆಹಲ್ಗಾಮ್‌ನಲ್ಲಿ ಪಾಕ್ ಉಗ್ರರು ದಾಳಿ ನಡೆಸಿ ಅಪಾಯಕರ ಬಲಿ ಪಡೆದಿದ್ದರು. ಇದಕ್ಕೆ ಪ್ರತ್ಯುತ್ತರವಾಗಿ ಭಾರತೀಯ ಸೇನೆ ಪಾಕ್‌ಗೆ ನುಗ್ಗಿ ಉಗ್ರರ ನೆಲೆಗಳನ್ನು ಧ್ವಂಸ ಮಾಡಿತ್ತು. ಆದರೂ ಬುದ್ಧಿ ಕಲಿಯದ ಪಾಕಿಸ್ತಾನ ತನ್ನ ಕೆಟ್ಟ ಚಾಳಿಯನ್ನೇ ಮುಂದುವರೆಸಿದ್ದು, ಇದಕ್ಕೆ ಮತ್ತೆ ಮತ್ತೆ ತಿರುಗೇಟು ನೀಡುವ ಕೆಲಸವನ್ನು ಭಾರತೀಯ ಸೇನೆ ಮಾಡುತ್ತಿದೆ.

ದೆಹಲಿ ವಿಮಾನ ನಿಲ್ದಾಣಕ್ಕೆ ಹೋಗುವ ಮತ್ತು ಬರುವ ಸುಮಾರು 138 ವಿಮಾನಗಳನ್ನು ರದ್ದುಗೊಳಿಸಲಾಗಿದೆ. ಅಂತಾರಾಷ್ಟ್ರೀಯ ಆಗಮನ– 04, ಅಂತಾರಾಷ್ಟ್ರೀಯ ನಿರ್ಗಮನಗಳು– 05, ದೇಶೀಯ ಆಗಮನಗಳು– 63 ದೇಶೀಯ, ನಿರ್ಗಮನಗಳು– 66 ವಿಮಾನಗಳನ್ನು ರದ್ದುಪಡಿಸಲಾಗಿದೆ ಎಂದು ತಿಳಿದುಬಂದಿದೆ.



# ಐಪಿಎಲ್ ಪಂದ್ಯಗಳು ರದ್ದು



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಭಾರತ ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾದ ಬೆನ್ನಲ್ಲೇ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಐಪಿಎಲ್ 2025 ಪಂದ್ಯಗಳನ್ನು ಸ್ಥಗಿತಗೊಳಿಸಿದ್ದು, ಒಂದು ವಾರ ಐಪಿಎಲ್ ಪಂದ್ಯಗಳನ್ನು ಸ್ಥಗಿತಗೊಳಿಸಲಾಗುತ್ತದೆ ಎಂದು ಮಾಹಿತಿ ನೀಡಿದೆ. ಆದರೆ, ಎಲ್ಲಾ ಆಟಗಾರರು ಮತ್ತು ಸಹಾಯಕ ಸಿಬ್ಬಂದಿಯನ್ನು ಮನೆಗೆ ಮರಳುವಂತೆ ನಿರ್ದೇಶನ ನೀಡಿದೆ.

ಈ ಸಮಯದಲ್ಲಿ ಹಲವಾರು ವಿದೇಶಿ ಆಟಗಾರರು ಭಾರತದಲ್ಲಿ ಕ್ರಿಕೆಟ್ ಆಡುವ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರು ಎಂದು ವರದಿಯಾಗಿತ್ತು.

ಆಸ್ಟ್ರೇಲಿಯಾ, ವೆಸ್ಟ್ ಇಂಡೀಸ್ ಮತ್ತು ದಕ್ಷಿಣ ಆಫ್ರಿಕಾದ ಕ್ರಿಕೆಟ್ ಮಂಡಳಿಗಳು ತಮ್ಮ ಆಟಗಾರರ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದವು ಮತ್ತು ಬಿಸಿಸಿಐ ಜೊತೆ ನಿರಂತರ ಸಂಪರ್ಕದಲ್ಲಿದ್ದವು.

# ಪಾಕಿಸ್ತಾನದ ಶೆಲ್ ದಾಳಿಗೆ ಆಂಧ್ರಪ್ರದೇಶದ ಸೈನಿಕ ಮುರಳಿ ನಾಯಕ್ ಹುತಾತ್ಮ



■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ

ಜಮ್ಮು ಮತ್ತು ಕಾಶ್ಮೀರದ ಗಡಿ ನಿಯಂತ್ರಣ ರೇಖೆಯಲ್ಲಿ (ಎಲ್‌ಒಸಿ) ಪಾಕಿಸ್ತಾನ ಸೇನೆ ನಡೆಸಿದ ಭಾರೀ ಶೆಲ್ ದಾಳಿಯಲ್ಲಿ ಆಂಧ್ರಪ್ರದೇಶದ ಸೈನಿಕನೊಬ್ಬ ಹುತಾತ್ಮರಾಗಿದ್ದಾರೆ. ಶ್ರೀಸತ್ಯಸಾಯಿ ಜಿಲ್ಲೆಯ ಮುರಳಿ ನಾಯಕ್ ಪಾಕಿಸ್ತಾನ ಸೇನೆಯ ಅನಿಯಂತ್ರಿತ ಶೆಲ್ ದಾಳಿಯಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ.

ಗದ್ದಮತ್ತಂಡ ಪಂಚಾಯತ್ ವ್ಯಾಪ್ತಿಯ ಕಲ್ಲಿತ್ತಂಡ ಗ್ರಾಮದ ಈ ಜವಾನ ಕರ್ತವ್ಯದಲ್ಲಿದ್ದರು. ಅವರ ಮೃತದೇಹ ಶನಿವಾರ ಅವರ ಊರಿಗೆ ತಲುಪುವ ನಿರೀಕ್ಷೆಯಿದೆ. ಬುಧವಾರ ಅಥವಾ ಗುರುವಾರ ನಡೆದ ಶೆಲ್ ದಾಳಿಯಲ್ಲಿ ನಾಯಕ್ ಸಾವನ್ನಪ್ಪಿದ್ದಾರೆಂದೇ ಎನ್ನಲಾಗಿದ್ದು, ತಕ್ಷಣಕ್ಕೆ ಯಾವುದೇ ಸ್ಪಷ್ಟತೆ ಇಲ್ಲ.

ಹುತಾತ್ಮ ಯೋಧ ಅವಿವಾಹಿತರಾಗಿದ್ದು, ರಾಜ್ಯದ ಸೈನಿಕ ಹುತಾತ್ಮರಾದ ಬಗ್ಗೆ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. "ದೇಶ ರಕ್ಷಣೆಯಲ್ಲಿ ಶ್ರೀ ಸತ್ಯಸಾಯಿ ಜಿಲ್ಲೆಯ ಪೆನುಕೊಂಡ ವಿಧಾನಸಭಾ ಕ್ಷೇತ್ರದ ಗೋರಂಟ್ಲಾ ಮಂಡಲದ ಮುರಳಿ ನಾಯಕ್ ಎಂಬ ಯೋಧ ಸಾವನ್ನಪ್ಪಿದ ಸುದ್ದಿ ಕೇಳಿ ದುಃಖವಾಗಿದೆ" ಎಂದು ಹೇಳಿದ್ದಾರೆ.

"ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಹುತಾತ್ಮ ಮುರಳಿ ನಾಯಕ್ ಅವರಿಗೆ ಶ್ರದ್ಧಾಂಜಲಿಗಳು. ಅವರ ಕುಟುಂಬ ಸದಸ್ಯರಿಗೆ ನನ್ನ ಆಳವಾದ ಸಂತಾಪ ಸೂಚಿಸುತ್ತೇನೆ" ಎಂದು ಮುಖ್ಯಮಂತ್ರಿಗಳು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಆಪರೇಷನ್ ಸಿಂಧೂರ್‌ನ ಭಾಗವಾಗಿ ಜಮ್ಮು ಮತ್ತು ಕಾಶ್ಮೀರದ ಯುದ್ಧಭೂಮಿಯಲ್ಲಿ ಹೋರಾಡುತ್ತಿದ್ದಾಗ ಮುರಳಿ ನಾಯಕ್ ಅವರ ನಿಧನದಿಂದ ತೀವ್ರ ದುಃಖಿತನಾಗಿದ್ದೇನೆ ಎಂದು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ನಾರಾ ಲೋಕೇಶ್ ಹೇಳಿದ್ದಾರೆ.

"ಶ್ರೀ ಸತ್ಯಸಾಯಿ ಜಿಲ್ಲೆಯ ಪೆನುಕೊಂಡ ಕ್ಷೇತ್ರದ ಗೋರಂಟ್ಲಾ ಮಂಡಲದ ಗದ್ದಮ್‌ತಂಡ ಪಂಚಾಯತ್‌ನ ಕಲ್ಲಿತಾಂಡ ಗ್ರಾಮದ ನಿವಾಸಿ ಮುರಳಿ ನಾಯಕ್ ಅವರು ತೋರಿಸಿದ ಶೌರ್ಯ ಮತ್ತು ಧೈರ್ಯವು ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿದೆ" ಎಂದು ಅವರು ಹೇಳಿದರು.

ನಾಯಕ್ ಅವರ ಅಂತ್ಯಕ್ರಿಯೆಯನ್ನು ಪೂರ್ಣ ರಾಜ್ಯ ಸರ್ಕಾರಿ ಗೌರವಗಳೊಂದಿಗೆ ನಡೆಸಲಾಗುವುದು ಎಂದು ಲೋಕೇಶ್ ಘೋಷಿಸಿದರು. ಅವರು ಕುಟುಂಬಕ್ಕೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ಭರವಸೆ ನೀಡಿದರು.

## ಇಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪ್ರಯುಕ್ತ ವಿಶೇಷ ಲೇಖನ

# ಸ್ತ್ರೀ ಕುಲದ ಆದರ್ಶರತ್ನ ಹೇಮರಡ್ಡಿ ಮಲ್ಲಮ್ಮ

ಮನುಕುಲದ ಇತಿಹಾಸದಲ್ಲೇ ಇಡೀ ಸ್ತ್ರೀ ಕುಲಕ್ಕೆ ಮಾದರಿಯಾಗಿರುವಂತೆ ವ್ಯಕ್ತಿತ್ವವನ್ನು ರೂಪಿಸಿಕೊಂಡು, ಕೌಟುಂಬಿಕ ಸಂಕಷ್ಟಗಳನ್ನು ಮೆಟ್ಟಿ ನಿಂತು, ಸಾಮಾಜಿಕ ಚಿಂತನೆಯಲ್ಲಿ ಬದುಕಿನ ಆದರ್ಶ ಮೌಲ್ಯಗಳನ್ನು ರೂಢಿಸಿಕೊಂಡು, ಧಾರ್ಮಿಕ ಸಾಧನೆಗೈದ ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಶ್ರೀಶೈಲ ಮಲ್ಲಿಕಾರ್ಜುನನನ್ನು ತನ್ನ ಆರಾಧ್ಯ ದೈವವಾಗಿ ಸ್ವೀಕರಿಸಿ ಸಾಕ್ಷಾತ್ಕರಿಸಿಕೊಂಡ ದಿವ್ಯ ಚೇತನ.

ಸುಮಾರು 600 ವರ್ಷಗಳ ಹಿಂದೆ ಆಂಧ್ರಪ್ರದೇಶದ ಶ್ರೀಶೈಲ ಪ್ರಾಂತ್ಯದ ಕರ್ನೂಲ್ ಜಿಲ್ಲೆಯ ಆತ್ಮಾಕೂರ ತಾಲೂಕಿನ ರಾಮಾಪುರ ಗ್ರಾಮದಲ್ಲಿ ಮಲ್ಲಮ್ಮನ ಜನನವಾಯಿತು. ತಂದೆ ನಾಗರೆಡ್ಡಿ ಮತ್ತು ತಾಯಿ ಗೌರಮ್ಮ, ದೊಡ್ಡ ಶ್ರೀಮಂತ ಮನೆತನದಲ್ಲಿ ಬೆಳೆದ ಮಲ್ಲಮ್ಮನಿಗೆ ಹದಿನಾರು ವರ್ಷ ತುಂಬಿದಾಗ ಸಿದ್ದಾಪುರ ಸಂಸ್ಥಾನದ ಒಡೆಯ ಶ್ರೀ ಹೇಮರಡ್ಡಿ ಅವರ ಮೂರನೆ ಮಗನಾದ ಭರಮರೆಡ್ಡಿಯವರಿಗೆ ಕೊಟ್ಟು ಮದುವೆ ಮಾಡಲಾಯಿತು.ನಂತರ ಮಹಾ ಶಿವಶರಣೆ ಮಲ್ಲಮ್ಮ ಸಿದ್ದಾಪುರಕ್ಕೆ ಅವಿಭಕ್ತ ಕುಟುಂಬದ ಸೊಸೆಯಾಗಿ ನಿಷ್ಠೆಯಿಂದ ಕಾಯಕ ಮಾಡುತ್ತಾ, ಗುರು ಲಿಂಗ ಜಂಗಮ ಸೇವೆಯಲ್ಲಿ ನಿರತಳಾದಳು. ಆದರೆ ಕೌಟುಂಬಿಕವಾಗಿ ಹಲವಾರು ಸಂಕಷ್ಟದ ಸವಾಲುಗಳನ್ನು ಎದುರಿಸಬೇಕಾಯಿತು.

ಕಷ್ಟಗಳ ಮಳೆಯೇ ಸುರಿದರೂ ಅದೆಲ್ಲವನ್ನೂ ಧೈರ್ಯದಿಂದ ಎದುರಿಸಿ ಸಾಮರಸ್ಯದ ಬಾಳನ್ನು ಬದುಕಿದ ಮಹಾಸಾಧ್ವಿ ಮಲ್ಲಮ್ಮ. ಮನೆಯಲ್ಲಿ ಮತಿಭ್ರಮಣ ಪತಿ ಭರಮರೆಡ್ಡಿ, ಅತ್ತೆ ಪದ್ಮಾವತಿ ಹಾಗೂ ನೆಗೆಣ್ಣಿಯರು ದಿನನಿತ್ಯದ ಕಿರುಕುಳ, ಇಲ್ಲಸಲ್ಲದ ಅಪವಾದಗಳು ಹಾಗೂ ಕೆಟ್ಟವರ ಸಹವಾಸಕ್ಕೆ ಒಳಗಾದ ಮೈದುನ ವೇಮನ ಈ ತರಹದ ಎಲ್ಲ ಸವಾಲುಗಳನ್ನು ದಿಟ್ಟತನದಿಂದ ಎದುರಿಸಿ ಮಲ್ಲಮ್ಮ ಮಲ್ಲಿಕಾರ್ಜುನ ಸ್ವಾಮಿಯನ್ನು ತನ್ನ ತಂದೆ ಎಂದು ನಂಬಿ ಆಧ್ಯಾತ್ಮ ಸಾಧನೆ ಮಾಡಿದರು.



ಲೌಕಿಕ ಆಸೆ-ಆಮಿಷಗಳಿಗೆ ಒಳಗಾಗಿದ್ದ ಮೈದುನ ವೇಮನನಿಗೆ ಮಲ್ಲಮ್ಮ ತನ್ನ ಆಧ್ಯಾತ್ಮಿಕ ಚಿಂತನೆಯ ಮೂಲಕ ನೀತಿ ಬೋಧನೆಯನ್ನು ಮಾಡಿ ಭೋಗಿಯಾಗಿದ್ದ ಮೈದುನನನ್ನು 'ಯೋಗಿ ವೇಮನ'ನನ್ನಾಗಿ ಪರಿವರ್ತಿಸಿದ ಗುರುಮಾತೆ ಹೇಮರಡ್ಡಿ ಮಲ್ಲಮ್ಮ. 'ಕಾಯಕದಿಂದಲೇ ಮುಕ್ತಿ' ಎಂಬ ಶರಣ ಸಿದ್ಧಾಂತದಂತೆ ಕೃಷಿ ಕಾಯಕದಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಸಾಂಸಾರಿಕ ಬದುಕನ್ನು ಜಯಿಸಿದ ಮಹಾಶರಣೆ.

ಹೇಮರಡ್ಡಿ ಮಲ್ಲಮ್ಮ ತನ್ನ ಕೊನೆಯ ದಿನಗಳನ್ನು ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿಯ ಗುಡ್ಡದಲ್ಲಿ ಆಶ್ರಮ ನಿರ್ಮಿಸಿಕೊಂಡು ಪತಿ ಭರಮರೆಡ್ಡಿ ಹಾಗೂ ತಾನು ಮಲ್ಲಿಕಾರ್ಜುನ ಸ್ವಾಮಿಯನ್ನು ನೆನೆಯುತ್ತ ತಪಸ್ಸು ಮಾಡುತ್ತಾ ಜೀವನವನ್ನು ಸಾಗಿಸಿದಳು. ಮಲ್ಲಮ್ಮನ ಭಕ್ತಿಗೆ ಮೆಚ್ಚಿದ ಸಾಕ್ಷಾತ್ ಮಲ್ಲಿಕಾರ್ಜುನ ಸ್ವಾಮಿಯೇ ಪ್ರತ್ಯಕ್ಷನಾಗಿ ಮಲ್ಲಮ್ಮ ನಿನ್ನ ಆಯುಷ್ಯ ಮುಗೀಯುತಾ ಬಂದಿತು, ನಿನಗೆ ಏನು ವರ ಬೇಕು ಎಂದು ಕೇಳಿದಾಗ, ಮಲ್ಲಮ್ಮ ತನಗೆ ಮೋಕ್ಷ ಬೇಕು ಎಂದು ಕೇಳಲಿಲ್ಲ. ಬದಲಿಗೆ ರೆಡ್ಡಿ ಕುಲಕ್ಕೆ ಎಂದಿಗೂ ಬಡತನ ಬರಬಾರದೆಂದು ಕೇಳಿಕೊಂಡಳು. ಮಲ್ಲಿಕಾರ್ಜುನ ಸ್ವಾಮಿಯೇ ಮಲ್ಲಮ್ಮನ ಭಕ್ತಿಗೆ ಮೆಚ್ಚಿ ಆಶೀರ್ವದಿಸಿದನು. ಆಗ ಮಲ್ಲಮ್ಮನ ಕಣ್ಣಲ್ಲಿ ಆನಂದ ಭಾಷ್ಪಗಳು ಸುರಿದವು. ಇಂದು ಅದೇ ಮಲ್ಲಮ್ಮನ ಕಣ್ಣೀರು ಪವಿತ್ರ ಝುರಿಯಾಗಿ ಹರಿಯುತ್ತಿದೆ. ಮಲ್ಲಮ್ಮ ಐಕ್ಯಳಾದ ಆ ಸ್ಥಳಕ್ಕೆ 'ಮಲ್ಲಮ್ಮನ ಕಣ್ಣೀರು' ಎಂದು ಕರೆಯಲಾಗುತ್ತಿದೆ.

ಕರ್ನಾಟಕ ರೆಡ್ಡಿ ಸಮಾಜವು ಶ್ರೀಶೈಲದ ಲಿಂಗಕ್ಕೆ ಜಗದ್ಗುರು ಶ್ರೀ ಉಮಾಪತಿ ಪಂಡಿತಾರಾಧ್ಯ ಭಗವತ್ಪಾದರ ಮಾರ್ಗದರ್ಶನದಲ್ಲಿ ಸುಂದರ ದೇವಾಲಯವನ್ನು ನಿರ್ಮಾಣ ಮಾಡಿ ದೇವಸ್ಥಾನವನ್ನು ಆಡಳಿತ ಮಂಡಳಿಯವರಿಗೆ ಒಪ್ಪಿಸಿದೆ. ನಿವೃತ್ತ ಡಿಎಸ್ಪಿ ವೈ.ಬಿ. ಆಲೂರು ಮತ್ತಿತರ ಹಿರಿಯರ ಶ್ರಮದಿಂದ ನಿರ್ಮಾಣಗೊಂಡ ದೇವಾಲಯಕ್ಕೆ ಇಂದು ನಿತ್ಯ ಸಾವಿರಾರು ಭಕ್ತರು ಭೇಟಿ ನೀಡಿ ದರ್ಶನ ಪಡೆಯುತ್ತಾರೆ.

ಸರಕಾರದ ನಿರ್ಣಯದಂತೆ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ 'ಹೇಮರಡ್ಡಿ ಮಲ್ಲಮ್ಮ ಅಧ್ಯಯನ ಪೀಠ' ಸ್ಥಾಪಿಸಲಾಗಿದೆ. ಸರ್ಕಾರದಿಂದ ಪ್ರತಿ ವರ್ಷ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆಗೆ ಆದೇಶಿಸಲಾಗಿದೆ. ಅದರಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಹಾಗೂ ಗದಗ ಜಿಲ್ಲಾ ಸಮಸ್ತ ರೆಡ್ಡಿ ಸಮಾಜದ ವತಿಯಿಂದ ಶ್ರೀ ಶಿವಾನಂದ ಕಲ್ಯಾಣ ಮಂಟಪ ಕಳಸಾಪುರ ರಸ್ತೆ ಗದಗನಲ್ಲಿ ಮುಂಜಾನೆ 10.30 ಗಂಟೆಗೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಆಚರಿಸಲಾಗುತ್ತಿದೆ. ಸಚಿವರು, ಶಾಸಕರು, ಇಲಾಖೆ ಅಧಿಕಾರಿಗಳು ಹಾಗೂ ಗದಗ ಜಿಲ್ಲಾ ರಡ್ಡಿ ಸಮಾಜದ ಗಣ್ಯರು ಈ ಕಾರ್ಯಕ್ರಮಕ್ಕೆ ಆಗಮಿಸುತ್ತಿದ್ದು, ತಾವೆಲ್ಲರೂ ಬಂದು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಮ್ಮೆಲ್ಲರಲ್ಲಿ ಸಮಸ್ತ ರಡ್ಡಿ ಬಳಗದ ಪರವಾಗಿ ಈ ಕಾರ್ಯಕ್ರಮಕ್ಕೆ ಸ್ವಾಗತ ಕೋರುತ್ತೇವೆ. ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮನ ಜೀವನದ ವಿಚಾರಗಳು, ಆದರ್ಶಗಳು ನಮ್ಮೆಲ್ಲರ ಮನೆ ಮನಗಳಲ್ಲಿ ದಾರಿದೀಪವಾಗಲಿ.



**– ಸುಧಾ ಹುಚ್ಚಣ್ಣವರ.**
ಉಪನ್ಯಾಸಕರು,
ಲೇಖಕರು– ಶಿರಹಟ್ಟಿ.

# ಭಾರತ-ಪಾಕಿಸ್ತಾನ ಉದ್ವಿಗ್ನತೆ; ಹಲವು ದೇಶಗಳಿಂದ ತನ್ನ ಪ್ರಯಾಣಿಕರಿಗೆ ಎಚ್ಚರಿಕೆ ಸಂದೇಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಕಿಂಗ್‌ಡಮ್ ಮತ್ತು ಕೆನಡಾ ಸೇರಿದಂತೆ ಹಲವು ದೇಶಗಳು ತನ್ನ ದೇಶದ ಪ್ರಯಾಣಿಕರಿಗೆ ಎಚ್ಚರಿಕೆ ನೀಡಿದ್ದು, ಜಮ್ಮು ಮತ್ತು ಕಾಶ್ಮೀರಕ್ಕೆ ತೆರಳದಂತೆ ಕಟ್ಟೆಚ್ಚರ ನೀಡಿವೆ.



ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಭಾರತ ನಡೆಸಿದ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆ ನಂತರ ಈ ಪ್ರಯಾಣ ನಿರ್ದೇಶನಗಳು ಬಂದಿವೆ.

ತನ್ನ ದೇಶದ ನಾಗರಿಕರಿಗೆ ಎಚ್ಚರಿಕೆ ನೀಡಿರುವ ಅಮೆರಿಕ, ತನ್ನ ದೇಶದ ಪ್ರಯಾಣಿಕರಿಗೆ ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶಕ್ಕೆ ತೆರಳದಂತೆ ಸೂಚಿಸಿದೆ. ಭಾರತ-ಪಾಕಿಸ್ತಾನ ಗಡಿ ಮತ್ತು ನಿಯಂತ್ರಣ ರೇಖೆಯ ಸುತ್ತಮುತ್ತಲಿನ ಪ್ರದೇಶಗಳಿಗೆ ಪ್ರಯಾಣಿಸುವುದನ್ನು ತಪ್ಪಿಸುವಂತೆಯೂ ಅದು ನಾಗರಿಕರಿಗೆ ಸಲಹೆ ನೀಡಿದೆ. ಅಮೆರಿಕ ವಿದೇಶಾಂಗ ಇಲಾಖೆಯು, ಪಾಕಿಸ್ತಾನಕ್ಕೆ ಸಾಮಾನ್ಯವಾಗಿ ಪ್ರಯಾಣವನ್ನು ಮರುಪರಿಶೀಲಿಸಿ ಎಂಬ ಸಲಹೆಯನ್ನು ಸಹ ನೀಡಿದೆ.

# ಶಿಕ್ಷೆ ಘೋಷಿಸಿದ ನ್ಯಾಯಾಲಯ | ಜನಾರ್ದನ ರೆಡ್ಡಿ ಶಾಸಕ ಸ್ಥಾನದಿಂದ ಅನರ್ಹ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಓಬಳಾಪುರಂ ಮೈನಿಂಗ್ ಕಂಪನಿ (OMC) ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಿಕ್ಷೆಗೊಳಗಾದ ನಂತರ ಗಣಿ ಉದ್ಯಮಿ ಮತ್ತು ಗಂಗಾವತಿಯ ಹಾಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರನ್ನು ರಾಜ್ಯ ವಿಧಾನಸಭೆಯ ಸದಸ್ಯ ಸ್ಥಾನದಿಂದ ಅನರ್ಹಗೊಳಿಸಲಾಗಿದೆ ಎಂದು ವರದಿಯಾಗಿದೆ. ಶಿಕ್ಷೆ ಘೋಷಿಸಿದ ನ್ಯಾಯಾಲಯ ರಾಜ್ಯ ವಿಧಾನಸಭೆ ಹೊರಡಿಸಿದ ಅಧಿಸೂಚನೆಯ ಪ್ರಕಾರ, ಅದು ಮೇ 7 ರಂದು ರೆಡ್ಡಿ ಅವರ ಅನರ್ಹತೆಯನ್ನು ಅಧಿಕೃತಗೊಳಿಸಿತು. ನಂತರ ತಕ್ಷಣವೇ ಭಾರತದ ಚುನಾವಣಾ ಆಯೋಗ ಮತ್ತು ಇತರ ಅಧಿಕಾರಿಗಳಿಗೆ ತಿಳಿಸಿದ್ದು, ಅನರ್ಹತೆ ಮೇ 6 ರಿಂದ ಜಾರಿಗೆ ಬರುತ್ತದೆ ಎಂದು ಹೇಳಿದೆ. ರೆಡ್ಡಿ ಅವರ ಅಪರಾಧವು ಸಂವಿಧಾನದ 191(1)(ಇ) ವಿಧಿ ಮತ್ತು 1951 ರ ಜನಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 8 ರ ಅಡಿಯಲ್ಲಿ ಶಾಸಕ ಸ್ಥಾನದಿಂದ ಅವರನ್ನು ತಕ್ಷಣದ ಅನರ್ಹತೆ ಮಾಡುವಂತೆ ಆಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

# ಹೆಮ್ಮೆಯ ಯೋಧರ ಗೆಲುವಿಗೆ ಪ್ರಾರ್ಥಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಾಕಿಸ್ತಾನದ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಉಗ್ರರ ನೆಲೆಗಳನ್ನು ಭಾರತೀಯ ಸೇನೆ ಧ್ವಂಸಗೊಳಿಸಿದ್ದು, ನಮ್ಮ ಹೆಮ್ಮೆಯ ಭಾರತೀಯ ಯೋಧರು ಪಾಕಿಸ್ತಾನದ ಪಾಪಿಗಳಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಗೌರವಾಧ್ಯಕ್ಷ ನಿಂಗನಗೌಡ ಮಾಲಿಪಾಟೀಲ್ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ ತಿಂಗಳು ಕರ್ನಾಟಕ ಸೇರಿದಂತೆ ವಿವಿಧ ರಾಜ್ಯದಿಂದ ಕಾಶ್ಮೀರಕ್ಕೆ ತೆರಳಿದ್ದ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಿ ಅಮಾಯಕ ನಾಗರಿಕರನ್ನು ಹತ್ಯೆಗೈದ ಉಗ್ರರಿಗೆ ಇದು ತಕ್ಕ ಶಾಸ್ತಿಯಾಗಿದೆ. ವಿಶ್ವದಾದ್ಯಂತ ಇಂತಹ ಉಗ್ರವಾದಿಗಳನ್ನು ಬೇರು ಸಮಿತ ಕಿತ್ತೊಗೆಯಬೇಕಿದೆ. ಈ ನಿಟ್ಟಿನಲ್ಲಿ, ನಮ್ಮ ದೇಶದ ಅಭಿವೃದ್ಧಿಗಾಗಿ, ನಮ್ಮ ದೇಶದ ನಾಗರಿಕರ ನೆಮ್ಮದಿಗಾಗಿ ಪಕ್ಷ, ಜಾತಿ ಭೇದ ಮರೆತು ದೇವರಲ್ಲಿ ಪ್ರಾರ್ಥನೆಯನ್ನು ಸಲ್ಲಿಸುವ ಮೂಲಕ ನಮ್ಮ ದೇಶದ ಯೋಧರಿಗೆ ಬೆಂಬಲ ನೀಡಬೇಕೆಂದು ವಿನಂತಿಸಿದ್ದಾರೆ.



# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ನ್ಯಾಯಮೂರ್ತಿ ಡಾ. ಎಚ್. ಎನ್. ನಾಗಮೋಹನ್‌ದಾಸ್ ಏಕ ಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿರುವ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕ ಪ್ರಾತಿನಿಧ್ಯದ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ಮಾಡುವ ಉದ್ದೇಶದಿಂದ ಹಮ್ಮಿಕೊಂಡಿದ್ದು, ಸಮೀಕ್ಷೆದಾರರು ಜಿಲ್ಲೆಯ ಯಾವ ಪರಿಶಿಷ್ಟ ಜಾತಿಯ ಕುಟುಂಬಗಳೂ ಈ ಸಮೀಕ್ಷೆಯಿಂದ ಹೊರಗುಳಿಯದಂತೆ ಮುಂಜಾಗ್ರತೆ ವಹಿಸಿ, ನಿಯಮಾನುಸಾರ ಸಮೀಕ್ಷೆ ಮಾಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಗುರುವಾರ ಮಧ್ಯಾಹ್ನ ಧಾರವಾಡ ನಗರದ ವಿವಿಧ ಪ್ರದೇಶಗಳಿಗೆ ಭೇಟಿ ನೀಡಿ, ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷಾ ಕಾರ್ಯದ ಪ್ರಗತಿ ಪರಿಶೀಲನೆ ಮಾಡಿದರು.

ವಿಭಿನ್ನ ಸ್ಥಳಗಳಲ್ಲಿ ವಾಸವಾಗಿರುವ ಅಥವಾ ವಿಭಿನ್ನ ವೃತ್ತಿಗಳನ್ನು ತೊಡಗಿರುವ ವ್ಯಕ್ತಿಗಳು ಹಾಗೂ ಜನ ಸಮೂಹಗಳಿಗೆ ಸಾಮಾಜಿಕ ಮತ್ತು ಆರ್ಥಿಕ ಅಸಮಾನತೆಯನ್ನು ಕಡಿಮೆ ಮಾಡಲು ಮತ್ತು ಸ್ಥಾನಮಾನ ಸೌಲಭ್ಯ ಹಾಗೂ ಅವಕಾಶಗಳಲ್ಲಿ ತಾರತಮ್ಯವನ್ನು ತೊಡೆದು ಹಾಕಲು ಕಾರ್ಯಕ್ರಮ ರೂಪಿಸುವುದಕ್ಕಾಗಿ ಸಾಮಾಜಿಕ ಸ್ಥಿತಿಗತಿಗಳ ಅಧ್ಯಯನ ಮಾಡಬೇಕಾಗಿರುವುದರಿಂದ ಈ ಸಮೀಕ್ಷೆಯನ್ನು ಕೈಗೊಳ್ಳಲಾಗಿದೆ. ಸಮೀಕ್ಷೆದಾರರು ಉದ್ದೇಶ ಅರಿತು ಸರಿಯಾಗಿ ಕುಟುಂಬಗಳ ಆರ್ಥಿಕ, ಶೈಕ್ಷಣಿಕ, ಔದ್ಯೋಗಿಕ ಅಂಶಗಳನ್ನು ಸಮೀಕ್ಷೆಯಲ್ಲಿ ದಾಖಲಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

## ಶ್ರೀ ವೀರಭದ್ರೇಶ್ವರ ದೇವಾಲಯದ ಪ್ರವೇಶೋತ್ಸವದ ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ಧರ್ಮದ ದಿಕ್ಸೂಚಿ ಬಾಳಿನ ಭಾಗ್ಯೋದಯಕ್ಕೆ ಅಡಿಪಾಯ



ಆಧುನಿಕ ಜಗತ್ತಿನಲ್ಲಿ ಪ್ರಗತಿಪರ ವಿಚಾರಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು. ಧರ್ಮಶ್ರದ್ಧೆ, ಸಾಮರಸ್ಯ, ರಾಷ್ಟ್ರಾಭಿಮಾನ ಬೆಳೆಸುವ ಗುರಿ ಎಲ್ಲರದಾಗಬೇಕು. ರವಿಕಿರಣದಿಂದ ಪುಷ್ಪ ಅರಳುತ್ತದೆ. ಗುರು ಕಾರುಣ್ಯ ಆತ್ಮವನ್ನು ಅರಳಿಸುತ್ತದೆ ಎಂದು ರಂಭಾಪುರಿ ಶ್ರೀಗಳು ನುಡಿದರು.

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಮಾನವನ ಮನಸ್ಸು, ಬುದ್ಧಿ ಮತ್ತು ಸದ್ವಿಚಾರಗಳು ಬೆಳೆದು ಬಂದಾಗ ಶ್ರೇಯಸ್ಸು ನಿಶ್ಚಿತ. ಆದರ್ಶ ಬದುಕಿಗೆ ಗುರು ಕಾರುಣ್ಯ, ಧರ್ಮಶ್ರದ್ಧೆ ಅವಶ್ಯಕ. ಧರ್ಮದ ದಿಕ್ಸೂಚಿ ಮಾನವನ ಬಾಳಿನ ಭಾಗ್ಯೋದಯಕ್ಕೆ ಅಡಿಪಾಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಮುಗುಳವಳ್ಳಿ ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ದೇವಾಲಯದ ಪ್ರವೇಶೋತ್ಸವದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳು ಸಕಲರ ಬಾಳಿಗೆ ಬೆಳಕು ತೋರುತ್ತವೆ. ಮುಗುಳವಳ್ಳಿ ಗ್ರಾಮದ ಸಕಲ ಸದ್ಭಕ್ತರ ಸಹಕಾರದಿಂದ ಭವ್ಯ ದಿವ್ಯ ಶ್ರೀ ವೀರಭದ್ರೇಶ್ವರ ದೇವಾಲಯ ನಿರ್ಮಿಸಿರುವುದು ಅತ್ಯಂತ ಸಂತೋಷ ಉಂಟು ಮಾಡುತ್ತದೆ. ಇದಕ್ಕಾಗಿ ಶ್ರಮಿಸಿದ ಎಲ್ಲ ಭಕ್ತರಿಗೆ ಶ್ರೀ ವೀರಭದ್ರೇಶ್ವರ ಸ್ವಾಮಿ ಶುಭವನ್ನು ಅನುಗ್ರಹಿಸಲೆಂದು ಶುಭ ಹಾರೈಸಿದರು.

ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು, ಶಂಕರದೇವರಮಠದ ಚಂದ್ರಶೇಖರ ಶಿವಾಚಾರ್ಯರು, ಬೇರುಗಂಡಿ ಮಠದ ರೇಣುಕ ಮಹಂತ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಫಲಹಾರಸ್ವಾಮಿ ಮಠದ ಮುರುಘೇಂದ್ರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು. ಮುಗುಳವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶೃತಿ ಉಮೇಶ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಹೆಚ್.ಡಿ. ತಮ್ಮಯ್ಯ, ನಯನ ಮೋಟಮ್ಮ, ವಿ.ಪ ಸದಸ್ಯರಾದ ಸಿ.ಟಿ. ರವಿ, ಎಸ್.ಎಲ್. ಭೋಜೇಗೌಡ, ಮಾಜಿ ಶಾಸಕ ಎಂ.ಪಿ. ಕುಮಾರಸ್ವಾಮಿ, ವಿ.ಪ ಮಾಜಿ ಸದಸ್ಯೆ ಗಾಯಿತ್ರಿ ಶಾಂತೇಗೌಡ, ಅ.ಭಾ.ವೀ. ಮ ಸಭಾ ಜಿಲ್ಲಾಧ್ಯಕ್ಷ ಹೆಚ್.ಎಂ. ಲೋಕೇಶ್, ಬಿ.ಎ. ಶಿವಶಂಕರ್, ಎಂ.ಎಸ್. ನಿರಂಜನ್, ಬಿ.ಹೆಚ್. ಹರೀಶ್, ಎ.ಎನ್. ಮಹೇಶ್, ಪ್ರೇಮಾ ಮಂಜುನಾಥ್, ಪುಷ್ಪಾ ಸೋಮಶೇಖರ್, ಎಂ.ಎಂ. ಪರಮೇಶ್ವರಪ್ಪ, ಹೆಚ್.ಸಿ. ಕಲ್ಕರುಡಪ್ಪ ಹಾಗೂ ದೇವಾಲಯ ಸಮಿತಿಯ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

ಮುಗುಳವಳ್ಳಿ ಎಂ.ಎನ್. ರೇಣುಕ ಕುಮಾರ್ ಪ್ರಾಸ್ತಾವಿಕ ನುಡಿ ಸಲ್ಲಿಸಿದರು. ಚೈತ್ರಾ ವಸಂತಕುಮಾರ್ ಬಿನ್ನವತ್ತಳೆ ವಾಚಿಸಿದರು. ಕಾರ್ಯದರ್ಶಿ ಎಂ.ಸಿ. ರುದ್ರೇಶ್ ಸರ್ವರನ್ನು ಸ್ವಾಗತಿಸಿದರು. ಎಂ.ಕೆ. ಗಿರಿಜೇಶ ಮತ್ತು ಅಭಿನಯ ಪಶುಕುಮಾರ್ ನಿರೂಪಿಸಿದರು. ಬಿಂದು ಗಿರೀಶ್ ವಂದಿಸಿದರು. ಸಮಾರಂಭಕ್ಕೂ ಮುನ್ನ ಭವ್ಯ ಮೆರವಣಿಗೆ ಮೂಲಕ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಬರಮಾಡಿಕೊಂಡರು. ನಂತರ ಲೋಕಕಲ್ಯಾಣಾರ್ಥವಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು.

# ಸಾಧಕ ವಿದ್ಯಾರ್ಥಿನಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಅಲ್ಪಸಂಖ್ಯಾತರ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಸೀರ್ ನರೆಗಲ್ ಅವರ ಪುತ್ರಿ, ದ್ವಿತೀಯ ಪಿ.ಯು ವಾಣಿಜ್ಯ ವಿಭಾಗದ ಸನಾ ನಾಸೀರ್ ನರೆಗಲ್ ಪ್ರಸಕ್ತ ಸಾಲಿನ ದ್ವಿತೀಯ ಪಿ.ಯು. ಪರೀಕ್ಷೆಯಲ್ಲಿ ಶೇ. 98.33 ಅಂಕಗಳನ್ನು ಪಡೆದು ರಾಜ್ಯಕ್ಕೆ 10ನೇ ರ್‍ಯಾಂಕ್ ಹಾಗೂ ಗದಗ ಜಿಲ್ಲೆಗೆ 2ನೇ ರ್‍ಯಾಂಕ್ ಗಳಿಸಿದ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಹಿರಿಯರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ಪ್ರಮುಖರಾದ ಸುಧೀರ ಕಾಟಿಗರ, ಅನಿಲ ಅಬ್ಬಿಗೇರಿ, ಮಂಜುನಾಥ ಶಾಂತಗೇರಿ, ರಾಚಯ್ಯ ಹೊಸಮಠ, ನಾಗರಾಜ ತಳವಾರ, ರವಿ ಮಾನ್ವಿ, ಸಂಜೀವಕುಮಾರ ಖಟವಟೆ, ರವಿ ಚವ್ಹಾಣ, ರಾಜು ಕಾಟಿಗರ ಮುಂತಾದವರಿದ್ದರು.

# ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ 2025-26ನೇ ಸಾಲಿನ ಶೈಕ್ಷಣಿಕ ಅವಧಿಗೆ ಬಿಸಿಎ, ಬಿಕಾಂ, ಬಿಎಸ್‌ಸಿ, ಬಿಎ ಸೇರಿದಂತೆ ವಿವಿಧ ಕೋರ್ಸ್‌ಗಳ ಕಲಿಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ದ್ವಿತೀಯ ಪಿಯುಸಿ ವಿಜ್ಞಾನ, ಕಾಮರ್ಸ್ ಪಾಸಾದ ವಿದ್ಯಾರ್ಥಿಗಳು ಬಿಸಿಎ ಪದವಿಗೆ, ಬಿಕಾಂ ಪದವಿಗೆ, ಪಿಯುಸಿ ವಿಜ್ಞಾನ ಪಾಸಾದ ವಿದ್ಯಾರ್ಥಿಗಳು ಬಿಎಸ್‌ಸಿಗೆ ಹಾಗೂ ಕಲಾ ವಿಭಾಗದಲ್ಲಿ ಪಾಸಾದ ವಿದ್ಯಾರ್ಥಿಗಳು ಬಿಎ ಪದವಿಗೆ ಪ್ರವೇಶ ಪಡೆಯಬಹುದಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಲ್ಲಿನ ಸರ್ಕಾರಿ ಪದವಿ ಕಾಲೇಜು ನ್ಯಾಕ್ ಬಿ+ ಗ್ರೇಡ್ ಹೊಂದಿದ್ದು, ಬಿಸಿಎ ಪದವಿಗೆ ಎಐಸಿಟಿಇ ನ್ಯೂ ದೆಹಲಿಯಿಂದ ಮಾನ್ಯತೆ ಪಡೆದಿರುವ ಗದಗ ಜಿಲ್ಲೆಯ ಪ್ರಥಮ ಸರ್ಕಾರಿ ಕಾಲೇಜು ಇದಾಗಿದೆ. ಬೋಧನೆಗೆ ತಕ್ಕ ವಿದ್ಯಾರ್ಹತೆ, ಅನುಭವ ಹೊಂದಿರುವ ಹಾಗೂ ಉತ್ತಮ ಕೌಶಲ್ಯ ಹೊಂದಿರುವ ಪ್ರಾಧ್ಯಾಪಕರ ತಂಡವನ್ನು ಹೊಂದಿದೆ. ಸುಸಜ್ಜಿತ ಕಟ್ಟಡ, ಗ್ರಂಥಾಲಯ ವ್ಯವಸ್ಥೆ, 10 ಸಾವಿರಕ್ಕೂ ಹೆಚ್ಚು ಪುಸ್ತಕಗಳು, ಅತ್ಯಾಧುನಿಕ ಕಂಪ್ಯೂಟರ್ ಲ್ಯಾಬ್, ವಿಜ್ಞಾನ ಪ್ರಯೋಗಾಲಯ ಸೌಲಭ್ಯವನ್ನು ಹೊಂದಿದೆ. ಕಾಲಕಾಲಕ್ಕೆ ಸರ್ಕಾರದಿಂದ ನೀಡಲಾಗುವ ವಿವಿಧ ಶೈಕ್ಷಣಿಕ ಯೋಜನೆಗಳ ಸೌಲಭ್ಯ, ವಿದ್ಯಾರ್ಥಿ ವೇತನ ಹಾಗೂ ಇತರೆ ಸೌಲಭ್ಯಗಳು ಲಭ್ಯವಿರುತ್ತವೆ. ಪಠ್ಯ ಬೋಧನೆಯ ಜೊತೆಗೆ ಪ್ರಾಯೋಗಿಕ, ವಿಶೇಷ ಉಪನ್ಯಾಸ, ಸ್ಪರ್ಧಾತ್ಮ ಪರೀಕ್ಷೆಗಳ ತಯಾರಿಗೆ ಮಾರ್ಗದರ್ಶನ ನೀಡಲಾಗುತ್ತದೆ.

ಹಾಗಾಗಿ ಸರ್ಕಾರಿ ಕಾಲೇಜಿನಲ್ಲಿ ಲಭ್ಯವಿರುವ ಶೈಕ್ಷಣಿಕ ಅವಕಾಶಗಳನ್ನು ಸದುಪಯೋಗ ಪಡೆದುಕೊಳ್ಳಲು ವಿದ್ಯಾರ್ಥಿಗಳು ಕಾಲೇಜಿನಲ್ಲಿ ಪದವಿ ಕೋರ್ಸ್‌ಗೆ ಪ್ರವೇಶ ಪಡೆದುಕೊಳ್ಳಬೇಕು ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗೆ 9449188352, 8296176753, 7676296140 ಸಂಪರ್ಕಿಸಬಹುದಾಗಿದೆ.


**'ಶಾಲಾ-ಕಾಲೇಜಿಗೊಂದು ಶರಣ ತತ್ವ ಚಿಂತನೆ' ಕಾರ್ಯಕ್ರಮದಲ್ಲಿ ಕೆ.ಎ. ಬಳಿಗೇರ ಅಭಿಮತ**

# ಬಸವಣ್ಣನವರ ವಚನಗಳು ಮನುಕುಲಕ್ಕೆ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಮಾಜಿಕ ಕ್ರಾಂತಿಯ ಹರಿಕಾರ, ವೈಚಾರಿಕ-ವೈಜ್ಞಾನಿಕ ಚಿಂತನೆಯುಳ್ಳ ವಿಶ್ವಗುರು ಬಸವಣ್ಣನವರ ಚಿಂತನೆ, ತತ್ವ, ಮೌಲ್ಯಗಳು, ವಚನಗಳ ಸಾರ-ಸಂಗ್ರಹ ಮನುಕುಲಕ್ಕೆ ದಾರಿದೀಪ ಮತ್ತು ಸಾಮಾಜಿಕ ಸಂಪತ್ತಾಗಿದೆ ಎಂದು ಸಾಹಿತಿ ಕೆ.ಎ. ಬಳಿಗೇರ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಸಹಸ್ರಾರ್ಜುನ ಬಿ.ಎಡ್ ಕಾಲೇಜಿನಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಶಾಲಾ-ಕಾಲೇಜಿಗೊಂದು ಶರಣ ತತ್ವ ಚಿಂತನೆ' ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.



ಬಸವಣ್ಣನವರು ಸಮಾಜದಲ್ಲಿರುವ ಅಜ್ಞಾನ, ಅಂಧಕಾರ, ಮೂಢನಂಬಿಕೆಗಳನ್ನು ಹೊಡೆದೋಡಿಸಿ ಮನುಕುಲಕ್ಕೆ ದಾರಿದೀಪವಾಗಿದ್ದಾರೆ. ಜಗಜ್ಯೋತಿ ಬಸವಣ್ಣನವರ ತತ್ವ-ಸಿದ್ಧಾಂತಗಳನ್ನು ಎಲ್ಲರೂ ಓದಿ ಅರ್ಥೈಸಿ ಜೀವನದಲ್ಲಿ ಅಳವಡಿಸಿಕೊಂಡರೆ ಸುಂದರ-ಸುಲಲಿತ ಬದುಕು ಪ್ರಾಪ್ತವಾಗುತ್ತದೆ. ಪ್ರತಿಯೊಬ್ಬರ ಜೀವನದಲ್ಲಿ ಬೆಳಕು ಮೂಡಲು ಇಂದು ಬಸವಣ್ಣನವರ ಚಿಂತನೆ, ಸಂದೇಶ, ವಚನಗಳ ಅಧ್ಯಯನ ಅಗತ್ಯವಿದೆ. ಬಸವೇಶ್ವರರು ವಿಶ್ವ ಕಂಡ ಶ್ರೇಷ್ಠ ತತ್ವಜ್ಞಾನಿ, ವಚನ ಸಾಹಿತ್ಯದ ಮೂಲಕ ಸಾಮಾಜಿಕ ಕ್ರಾಂತಿಗೆ ಕಾರಣರಾದ ಅವರ ಜ್ಞಾನ ಭಂಡಾರದ ಬಗ್ಗೆ ವಿದೇಶಿಗರೂ ಆಕರ್ಷಿತರಾಗಿದ್ದು, ಭಾರತೀಯರು ಇತ್ತ ಚಿತ್ತ ಹರಿಸಬೇಕಾಗಿದೆ.

ಪ್ರಶಿಕ್ಷಣಾರ್ಥಿಗಳು ಈ ಬಗ್ಗೆ ಆಳವಾದ ಅಧ್ಯಯನ ಮಾಡಿ ಭವಿಷ್ಯದಲ್ಲಿ ಮಕ್ಕಳಲ್ಲಿ ಬಿತ್ತುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಶ.ಸಾ.ಪದಿಂದ ಜಿಲ್ಲೆಯಲ್ಲಿನ ಎಲ್ಲ ಡಿ.ಎಡ್/ಬಿ.ಎಡ್ ಕಾಲೇಜುಗಳಲ್ಲಿ ಶರಣ ತತ್ವ ಚಿಂತನ ಕಾರ್ಯಕ್ರಮ ನಡೆಸಲಾಗುವುದು. ಅಲ್ಲದೇ 'ಮನೆ ಮನದಂಗಳದಿ ವಚನ ರಥ ಶರಣರ ಪಥ' ಕಾರ್ಯಕ್ರಮ ಆರಂಭಿಸಿದ್ದೇವೆ ಎಂದರು.

ಕಾಲೇಜಿನ ಪ್ರಾಚಾರ್ಯರಾದ ಆರ್.ಎಂ. ಅಂಗಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, 12ನೇ ಶತಮಾನದಲ್ಲಿ ಬಸವಾದಿ ಶರಣರು ಜನರಾಡುವ ಸಾಮಾನ್ಯ ಭಾಷೆಯ ವಚನ ಸಾಹಿತ್ಯದ ಮೂಲಕ ಸಂವಿಧಾನದ ಆಶಯಗಳನ್ನು ಮೂಡಿಸುವ ಕೆಲಸ ಮಾಡಿದ್ದಾರೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಶರಣರ ತತ್ವ ಚಿಂತನೆಗಳನ್ನು ತಿಳಿಸುವುದು ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಶ.ಸಾ.ಪ ಕಾರ್ಯ ಶ್ಲಾಘನೀಯ ಎಂದರು.

ಮಕ್ಕಳ ಸಾಹಿತ್ಯ ವೇದಿಕೆಯ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ, ಕನ್ನಡ ಸಾರಸ್ವತ ಲೋಕಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರ-ಅಗ್ರಗಣ್ಯವಾಗಿದೆ. ಶರಣರ ಮೇಲೆ ನಡೆದಂತೆ ಅವರ ವಚನ ಸಾಹಿತ್ಯದ ಮೇಲೆ ಈಗಲೂ ದಬ್ಬಾಳಿಕೆ ನಡೆದಿದೆ. ಹೀಗಾಗಿ ವಚನ ಸಾಹಿತ್ಯದ ಪ್ರಚಾರ ಮತ್ತು ಉಳಿವಿಗಾಗಿ ಈಗಲೂ ಹೋರಾಟ ನಡೆದಿರುವುದು ವಿಷಾದನೀಯ ಎಂದರು.

ಪ್ರೊ. ಸೋಮಶೇಖರ ಕೆರಿಮನಿ ಮಾತನಾಡಿದರು. ಪುರಸಭೆ ಮಾಜಿ ಅಧ್ಯಕ್ಷೆ ಅಶ್ವಿನಿ ಅಂಕಲಕೋಟಿ, ಕದಳಿ ವೇದಿಕೆಯ ತಾಲೂಕಾಧ್ಯಕ್ಷೆ ನಿರ್ಮಲಾ ಅರಳಿ, ಬೂದಪ್ಪ ಅಂಗಡಿ, ಕೆ.ಆರ್. ನಿಂಬಣ್ಣವರ, ಎಂ.ಕೆ. ಕಳ್ಳಿಮಠ, ನಾಗರಾಜ ಮಜ್ಜಿಗುಡ್ಡದ ಸೇರಿ ಉಪನ್ಯಾಸಕ ವರ್ಗ, ಪ್ರಶಿಕ್ಷಣಾರ್ಥಿಗಳು ಇದ್ದರು. ಪ್ರಭಾವತಿ ಕೊಡ್ಲಿವಾಡ, ಬಿ.ಎಂ. ದ್ಯಾವಣ್ಣವರ, ಎಂ.ಆಯ್. ಮಾಗಳದ ನಿರೂಪಿಸಿದರು.

# ರಕ್ತದಾನ ಅತ್ಯಂತ ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ರಕ್ತದಾನಕ್ಕೆ ಒಂದು ಅಮೂಲ್ಯವಾದ ಜೀವವನ್ನು ಉಳಿಸುವ ಶಕ್ತಿ ಇದೆ. ಹೀಗಾಗಿ ರಕ್ತದಾನವು ಅತ್ಯಂತ ಶ್ರೇಷ್ಠ ದಾನವಾಗಿದೆ ಎಂದು ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಡಾ. ಪ್ರವೀಣ ತುಪ್ಪದ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ರೆಡ್ ಕ್ರಾಸ್ ದಿನಾಚರಣೆ ಅಂಗವಾಗಿ ರಕ್ತದಾನ ಮಹತ್ವ ಹಾಗೂ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರತಿಯೊಂದು ಜೀವಿ ಬದುಕಲು ರಕ್ತ ತುಂಬಾ ಅವಶ್ಯವಾಗಿದ್ದು,



ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ರಕ್ತದಾನ ಮಾಡುವುದರಿಂದ ಉತ್ತಮ ಆರೋಗ್ಯ ಹೊಂದುವುದರ ಜೊತೆಯಲ್ಲಿ ಮತ್ತೊಂದು ಜೀವ ಉಳಿಸುವ ಮಹಾನ್ ಕಾರ್ಯದಲ್ಲಿ ಪಾಲ್ಗೊಂಡಂತಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ವಹಿಸಿದ್ದರು. ಮಾರುತಿ, ನಾಗರಾಜ ಎ, ಆರೋಗ್ಯ ಸಿಬ್ಬಂದಿ ನಜೀರ್ ಹಾಗೂ ಕಾಲೇಜು ಬೋಧಕ-ಬೋಧಕೇತರ ಸಿಬ್ಬಂದಿ ಇದ್ದರು.

# ಭಾರತೀಯ ಸೈನಿಕರ ಕಾರ್ಯಕ್ಕೆ ಮೆಚ್ಚುಗೆ

▶▶ಮೊದಲನೇ ಪುಟದಿಂದ

ಪಹಲ್ಗಮ್ ದಾಳಿ ಹಿನ್ನೆಲೆಯಲ್ಲಿ ಆಪರೇಷನ್ ಸಿಂಧೂರ ಕಾರ್ಯಾಚರಣೆ ಮೂಲಕ ದೇಶ ರಕ್ಷಣೆಯಲ್ಲಿ ತೊಡಗಿರುವ ಭಾರತೀಯ ಸೈನಿಕರಿಗೆ ದೇಶ ರಕ್ಷಣೆಯ ಇನ್ನಷ್ಟು ಶಕ್ತಿಯನ್ನು ಭಗವಂತ ನೀಡಲಿ. ಭಯೋತ್ಪಾದಕರನ್ನು ದಮನ ಮಾಡಿ ದೇಶದ ಶಾಂತಿಗೆ ಮುಂದಾಗಿರುವ ನಮ್ಮ ಹೆಮ್ಮೆಯ ದೇಶದ ಸೈನಿಕರಿಗೆ ಶಕ್ತಿ ತುಂಬಲು ಅವರ ಶ್ರೇಯಸ್ಸಿಗಾಗಿ ಪ್ರಾರ್ಥಿಸುವೆವು ಎಂದರು.

ಕಾರ್ಯದರ್ಶಿ ಹೀರಾಚಂದ ಸೆಮ್ಲಾನಿ ಮಾತನಾಡಿ, ಭಾರತದ ಹಾಗೂ ಪಾಕಿಸ್ತಾನದ ನಡುವೆ ಯುದ್ಧ ಆರಂಭವಾಗಿದ್ದು, ಗಡಿಯಲ್ಲಿ ಪಾಕಿಸ್ತಾನದ ಕ್ಷಿಪಣಿಗಳನ್ನು ಭಾರತ ಹೊಡೆದುರುಳಿಸಿದೆ. ಸದ್ಯ ಜಮ್ಮು ಕಾಶ್ಮೀರ, ಪಂಜಾಬ್, ಗುಜರಾತ್ ಸೇರಿದಂತೆ ಹಲವು ಭಾಗಗಳಲ್ಲಿ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದೆ. ಭಾರತ ನಡೆಸುತ್ತಿರುವ ದಾಳಿಗೆ ಪಾಕಿಸ್ತಾನ ಕಂಗಾಲಾಗಿ ಹೋಗಿದೆ ಎಂದರು. ಖಜಾಂಚಿ ಮಹಾವೀರ ಸೋಳಂಕಿ, ಸುರೇಶ ಓಸ್ವಾಲ, ಹರೀಶ್ ಶಹಾ, ಸುರೇಶ ಕೊಠಾರಿ, ಪೃಥ್ವಿರಾಜ ಬನ್ಸಾಲಿ, ಮದನಲಾಲ ಲುಂಕಡ, ಪ್ರವೀಣ ಸಂಕ್ಲೇಚಾ, ಸ್ವರೂಪ ಧೋಖಾ, ಧೀರಜ್ ಭಾಪಣಾ, ರಾಜೇಂದ್ರ ಸಂಘವಿ, ಮೋಹನ ಪವಾರ, ಮಹಾವೀರ ಸಂಕ್ಲೇಚಾ, ರಾಜೇಂದ್ರ ಪಾಲರೇಚಾ ಮುಂತಾದವರಿದ್ದರು.



ಸೂರಣಗಿ ಗ್ರಾಮದಲ್ಲಿ ಏ.27ರಂದು ಸಿಡಿಲಿನಿಂದ ಎತ್ತೊಂದು ಮೃತಪಟ್ಟಿತ್ತು. ಎತ್ತಿನ ಮಾಲಕ, ರೈತ ಸೋಮಪ್ಪ ಭೀಮಪ್ಪ ಪೂಜಾರ ಅವರಿಗೆ ಶಾಸಕ ಡಾ. ಚಂದ್ರು ಲಮಾಣಿ ಸರ್ಕಾರದ ಪರಿಹಾರ ಧನ (ವಿಪತ್ತು ನಿರ್ವಹಣಾ ಖಾತೆ) 37500 ರೂ ಮೊತ್ತದ ಚೆಕ್ ವಿತರಿಸಿದರು. ತಹಸೀಲ್ದಾರ ವಾಸುದೇವ ಸ್ವಾಮಿ, ನಾಗರಾಜ ಹಾವಳಕೇರಿ, ಸೋಮಪ್ಪ ಪೂಜಾರಿ, ಕಂದಾಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ದಿಟ್ಟತನ ಮೆರೆದ ಸೋಫಿಯಾ ಖುರೇಶಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಲ್ ಸೋಫಿಯಾ ಅವರು 'ಆಪರೇಷನ್ ಸಿಂಧೂರ'ದ ನಂತರ ಸಮಸ್ತ ಭಾರತೀಯರು ಹೆಮ್ಮೆ ಪಡುವಂತಹ ದಿಟ್ಟ ಮುಸ್ಲಿಂ ಸಮುದಾಯದ ವೀರ ವನಿತೆಯಾಗಿ ಪಾಕಿಸ್ತಾನಿ ಭಯೋತ್ಪಾದಕರಿಗೆ ನರಕದ ಹಾದಿ ತೋರಿಸುವ ಮೂಲಕ ಜನಮನ ಗೆದ್ದಿದ್ದಾರೆ ಎಂದು ಗದಗ-ಬೆಟಗೇರಿ ನಗರಸಭೆಯ ಸದಸ್ಯರು ಹಾಗೂ ವಿರೋಧ ಪಕ್ಷದ ಉಪ ನಾಯಕರಾದ ಜನಾಬ ಬರಕತ ಅಲಿ ಮುಲ್ಲಾ ಶ್ಲಾಘಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸೋಫಿಯಾ ದಿಟ್ಟತನದಿಂದ 'ಫೋರ್ಸ್ 18' ಅನ್ನು ಸಹ ಮುನ್ನಡೆಸಿದ್ದಾರೆ. 2006ರಲ್ಲಿ 'ಫೋರ್ಸ್ 18'ನಲ್ಲಿ ಭಾಗವಹಿಸಿದ 18 ದೇಶಗಳ ಪ್ರತಿನಿಧಿಗಳಲ್ಲಿ ಸೋಫಿಯಾ ಏಕೈಕ ಮಹಿಳಾ ಕಮಾಂಡರ್




ಆಗಿದ್ದರು. ಅವರ ಸಾಧನೆಯನ್ನು ಭಾರತದ ಮೊದಲ ರಕ್ಷಣಾ ಮುಖ್ಯಸ್ಥ ಮತ್ತು ಮಾಜಿ ರಕ್ಷಣಾ ಸಿಬ್ಬಂದಿ (ಸಿಡಿಎಸ್) ದಿವಂಗತ ಜನರಲ್ ಬಿಪಿನ್ ರಾವತ್ ಶ್ಲಾಘಿಸಿದ್ದರು.

ಸೇನೆಯಲ್ಲಿ ನಾವು ಸಮಾನ ಅವಕಾಶಗಳು ಮತ್ತು ಜವಾಬ್ದಾರಿಗಳನ್ನು ಪರಿಗಣಿಸುವ ಮೂಲಕ ಪುರುಷ ಮತ್ತು ಮಹಿಳಾ ಅಧಿಕಾರಿಗಳ ನಡುವೆ ಯಾವುದೇ ತಾರತಮ್ಯವಿಲ್ಲ ಎಂದೂ ಅವರು ತಿಳಿಸಿದ್ದರು.

ಒಟ್ಟಿನಲ್ಲಿ ಮುಸ್ಲಿಂ ಸಮುದಾಯದಲ್ಲಿ ಜನಿಸಿದ ದಿಟ್ಟ ಮಹಿಳೆಯೊಬ್ಬಳು ಭಾರತೀಯ ಸೇನೆಯಲ್ಲಿ ಅದರಲ್ಲೂ ಪಾಕಿಸ್ತಾನದ ವಿರುದ್ಧ 26 ಭಾರತೀಯ ನಾಗರಿಕರ ಕುಂಕುಮ ಕಸಿದ ದುಷ್ಟ ಉಗ್ರಗಾಮಿಗಳನ್ನು ಮಟ್ಟಹಾಕುವಲ್ಲಿ ಮತ್ತು ಪಾಕಿಸ್ತಾನದ ವಿರುದ್ಧ ಸಮರಗೈದು ದಿಟ್ಟತನ ಮೆರೆದ ಸೂಫಿಯಾ ಖುರೇಶಿಯವರ ದೇಶಪ್ರೇಮ ಮುಸ್ಲಿಂ ಸಮುದಾಯದ ನಾಗರಿಕರು ಹೆಮ್ಮೆ ಪಡುವ ಸಂಗತಿಯಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ನಿವೃತ್ತರ ಸಂಘದ ನಿವೇಶನಕ್ಕಾಗಿ ಪ್ರಯತ್ನಿಸೋಣ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ ಹಾಗೂ ನಿವೃತ್ತ ನೌಕರರ ಸಂಘಕ್ಕೆ ತನ್ನ ಚಟುವಟಿಕೆಗಳನ್ನು ನಡೆಸಲು ನಿರ್ದಿಷ್ಟ ಕಟ್ಟಡವೊಂದು ಬೇಕು. ಅದಕ್ಕೂ ಮೊದಲು ಒಂದು ನಿವೇಶನ ಬೇಕು. ಅದಕ್ಕಾಗಿ ತಕ್ಷಣವೇ ನಿವೇಶನ ನೀಡಲು ವಿನಂತಿಸಿ ಪಟ್ಟಣ ಪಂಚಾಯಿತಿಗೊಂದು ಪತ್ರವನ್ನು ನೀಡಬೇಕೆಂದು ನ್ಯಾಯವಾದಿ, ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವೀರಣ್ಣ ದಿಂಡೂರ ಹೇಳಿದರು.

ಪಟ್ಟಣದ ಶ್ರೀ ರೇಣುಕಾಚಾರ್ಯ ಶಾಲೆಯಲ್ಲಿ ಶುಕ್ರವಾರ ಜರುಗಿದ ಎರಡೂ ಸಂಘಟನೆಗಳ ಸಭೆಯ ಸದಸ್ಯರನ್ನುದ್ದೇಶಿಸಿ ಅವರು ಮಾತನಾಡಿದರು. ನಿವೇಶನ ದೊರಕಿದ ನಂತರ ಕಟ್ಟಡ ನಿರ್ಮಾಣದ ಬಗ್ಗೆ ಯೋಜನೆಯನ್ನು ಹಾಕಿಕೊಳ್ಳೋಣ. ನಮ್ಮ ಸಂಘದ ಚಟುವಟಿಕೆಗಳನ್ನು ಅಲ್ಲಿಯೇ ನಡೆಸಲು ನಮಗೆ ಅನುಕೂಲವಾಗುತ್ತದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳು ಹಿರಿಯ ನಾಗರಿಕರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿವೆ. ಅವುಗಳನ್ನು ಪಡೆಯಲು ನಾವೆಲ್ಲರೂ ಶ್ರಮಿಸೋಣ ಎಂದರು. ನಿವೇಶನ ದೊರೆತು ಕಟ್ಟಡ ಪ್ರಾರಂಭವಾದರೆ ನಮ್ಮ ಶಾಸಕರು ಮತ್ತು ಸಂಸದರಿಂದ ಅನುದಾನವನ್ನು ಪಡೆದುಕೊಳ್ಳಬಹುದು. ನಾವೂ ಸಹ ನಮ್ಮ ಶಕ್ತ್ಯಾನುಸಾರ ಧನ ವಿನಿಯೋಗಿಸಿ ಸುಂದರ ಕಟ್ಟಡವನ್ನು ನಿರ್ಮಿಸೋಣ. ನಿವೇಶನದ ಅರ್ಜಿ ನೀಡಲು ಶೀಘ್ರವೇ ಪಟ್ಟಣ ಪಂಚಾಯಿತಿಗೆ ಹೋಗೋಣ ಎಂದರು.

ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ಬರುವ ಜೂನ್ ಅಥವಾ ಜುಲೈ ತಿಂಗಳಿನಲ್ಲಿ ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರಿಗಾಗಿ ಕಾನೂನು ಅರಿವು ನೆರವು ಶಿಬಿರವನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ. ಆ ಸಂದರ್ಭದಲ್ಲಿ ಎಲ್ಲ ಸದಸ್ಯರೂ ಹಾಜರಿದ್ದು ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು. ಹಿರಿಯ ಸದಸ್ಯರಾದ ಸಿ.ವಿ. ವಂಕಲಕುಂಟಿ, ಎಂ.ಎ. ಹಿರೆವಡೆಯರ ಸಭೆಯನ್ನುದ್ದೇಶಿಸಿ ಮಾತನಾಡಿದರು. ವೇದಿಕೆಯ ಮೇಲೆ ಸಿ.ಎಂ. ಶಿಸ್ತಗಾರ ಇದ್ದರು. ಸಭೆಯಲ್ಲಿ ಡಾ. ರಾಜೇಂದ್ರ ಗಚ್ಚಿನಮಠ, ಕಾಶಪ್ಪ ಸಂಗನಾಳ, ಗುರುಪಾದಪ್ಪ ಬೆಲ್ಲದ, ಎಚ್.ಕೆ. ಜೋಗಿ, ಫಕೀರಪ್ಪ ಧರ್ಮಾಯತ, ಅರುಣ ಕುಲಕರ್ಣಿ, ಸುರೇಶ ಬಾಗಲಿ ಇನ್ನಿತರರಿದ್ದರು. ಶಿವಯೋಗಿ ಜಕ್ಕಲಿ ಸ್ವಾಗತಿಸಿ, ಲೆಕ್ಕ ಪತ್ರ ನೀಡಿದರು. ವೀರಭದ್ರಪ್ಪ ಕೆರಿಯವರ ನಿರೂಪಿಸಿದರು.

## ರೌಡಿ ಸುಹಾಸ್ ಹತ್ಯೆ ಪ್ರಕರಣ | ಯಾವುದೇ ರೀತಿಯ ತನಿಖೆಗೆ ನನ್ನ ಆಕ್ಷೇಪವಿಲ್ಲ: ಯು.ಟಿ. ಖಾದರ್

■ವಿಜಯಸಾಕ್ಷಿ ಸುದ್ದಿ, ಮಂಗಳೂರು

ಮಂಗಳೂರಿನ ಬಜ್ಪೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ರೌಡಿ ಸುಹಾಸ್ ಶೆಟ್ಟಿ ಹತ್ಯೆಯ ಬಗ್ಗೆ ಯಾವುದೇ ರೀತಿಯ ತನಿಖೆಗೆ ತನ್ನ ಆಕ್ಷೇಪವಿಲ್ಲ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಹೇಳಿದ್ದಾರೆ. ತನಿಖೆ ತೃಪ್ತಿಕರವಾಗಿಲ್ಲ ಎಂದು ಬಿಜೆಪಿ ಹೇಳುತ್ತಿರುವ ಬಗ್ಗೆ ಮತ್ತು ಕೊಲೆಯ ಬಗ್ಗೆ ಎನ್‌ಐಎ ತನಿಖೆಗೆ ಒತ್ತಾಯಿಸುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಅವರು ಉತ್ತರಿಸುತ್ತಿದ್ದರು.

# ಯುದ್ಧ ಪರಿಸ್ಥಿತಿ ನಿರ್ವಹಣೆಗೆ ಸನ್ನದ್ಧರಾಗಿ

▶▶ಮೊದಲನೇ ಪುಟದಿಂದ

**ಸಭೆಯ ಮುಖ್ಯಾಂಶಗಳು**

* ಜಿಲ್ಲೆಯ ಹಮ್ಮಿಗಿ ಡ್ಯಾಂ, ಡಂಬಳ ರಸ್ತೆಯಲ್ಲಿರುವ ಕೆ.ಇ.ಬಿ ಗ್ರಿಡ್ ಮತ್ತು ಜಿಮ್ಸ್ ಆಸ್ಪತ್ರೆಗೆ ವಿಶೇಷ ಬಂದೋಬಸ್ತ್‌ಗಾಗಿ ಪೊಲೀಸ್ ನಿಯೋಜನೆ.
* ಪ್ರಮುಖ ಸ್ಥಳಗಳಲ್ಲಿ ಮಾಕ್ ಡ್ರಿಲ್ ಮಾಡುವ ಕುರಿತು ಯೋಜನೆ ಸಿದ್ಧಗೊಳಿಸಿ.
* ತಾಲೂಕಾ ಮಟ್ಟದಲ್ಲಿ ಇದ್ದ ಪರಿಸ್ಥಿತಿ ನಿರ್ವಹಣೆಗೆ ಸಭೆ ಜರುಗಿಸಲು ಸೂಚನೆ.
* ಜನಸಾಮಾನ್ಯರಲ್ಲಿ ಆತ್ಮಸ್ಥೈರ್ಯ ತುಂಬಲು ಜಾಗೃತಿ ಕಾರ್ಯಕ್ರಮ ಆಯೋಜಿಸಿ.
* ಸುಳ್ಳು ಸುದ್ದಿಗಳ ಕುರಿತು ಜನಸಾಮಾನ್ಯರು ಪ್ರತಿಕ್ರಿಯಿಸದಿರಲು ಸೂಚನೆ.
* ವಿವಿಧ ಇಲಾಖೆಗಳಿಗೆ ಯುದ್ಧ ಪರಿಸ್ಥಿತಿ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ.
* ಜನಸಾಮಾನ್ಯರಿಗೆ ಪೊಲೀಸ್ ಹಾಗೂ ಸ್ಥಳೀಯ ಸಂಸ್ಥೆಗಳ ವಾಹನಗಳ ಮೂಲಕ ಸೈರನ್ ಸೂಚನೆ.
* ಜಿಲ್ಲಾಡಳಿತದಲ್ಲಿ ಕಂಟ್ರೋಲ್ ರೂಂ ಆರಂಭಿಸಲು ಕ್ರಮ.
* ಇಂಟರ್‌ನೆಟ್ ಸಂಪರ್ಕ ಸುಸ್ಥಿತಿಯಲ್ಲಿಟ್ಟುಕೊಳ್ಳಲು ಸೂಚನೆ.
* ತುರ್ತು ಪರಿಸ್ಥಿತಿಯಲ್ಲಿ ಮಾಧ್ಯಮಗಳಿಗೆ ಅಧಿಕೃತ ಸುದ್ದಿ ಬಿಡುಗಡೆಗೆ ನೋಡಲ್ ಅಧಿಕಾರಿ ನೇಮಕ.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ವಿವಿಧ ಇಲಾಖೆಗಳು ತುರ್ತು ಪರಿಸ್ಥಿತಿಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳನ್ನು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಪೊಲೀಸ್ ಪಡೆಗಳು, ಎನ್‌ಸಿಸಿ, ಎನ್‌ಎಸ್‌ಎಸ್, ಹೋಮ್ ಗಾರ್ಡ್ಸ್, ನಾಗರಿಕ ಸೇವಾ ಇಲಾಖೆ ಅಧಿಕಾರಿಗಳು ಹಾಜರಿದ್ದರು.

**ಸ.ಪ್ರ.ದ ಮಹಿಳಾ ಕಾಲೇಜಿನ ಎನ್.ಎಸ್.ಎಸ್ ಶಿಬಿರದಲ್ಲಿ ಪ್ರೊ. ಅಲ್ಲಮ ಪ್ರಭು ಬೆಟ್ಟದೂರು**

# ಶ್ರಮ ಜೀವನದ ಬೆಲೆ ಅರಿಯಿರಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಭೌದ್ಧಿಕತೆ ಜೊತೆಗೆ ಶ್ರಮದಾನ ಕೂಡ ಬಹಳ ಮುಖ್ಯ ಎಂದು ಸಾಹಿತಿ ಪ್ರೊ. ಅಲ್ಲಮ ಪ್ರಭು ಬೆಟ್ಟದೂರು ಹೇಳಿದರು.

ತಾಲೂಕಿನ ಲೇಬಗೇರಿ ಗ್ರಾಮದಲ್ಲಿ ಕೊಪ್ಪಳದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಎನ್.ಎಸ್.ಎಸ್ ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.



ಶ್ರಮ ಜೀವನದ ಬೆಲೆ ತಿಳಿದುಕೊಳ್ಳಬೇಕು. ಎಲ್ಲರೂ ಶ್ರಮಪಟ್ಟರೆ ದೇಹಕ್ಕೆ ಒಳ್ಳೆಯದು. ಶ್ರಮ ಜೀವನದಿಂದ ನಾವು ಏನನ್ನೂ ಕಳೆದುಕೊಳ್ಳುವುದಿಲ್ಲ. ನಮ್ಮ ದೇಶದಲ್ಲಿ ವಿವಿಧತೆಯಿದೆ. ವಿವಿಧ ಆಹಾರ ಪದ್ಧತಿ, ವಿವಿಧ ಸಂಸ್ಕೃತಿ, ವಿವಿಧ ಭಾಷೆ ಇದೆ. ಕನ್ನಡ ಸಾಹಿತ್ಯದಲ್ಲಿ ಪ್ರಾಚೀನ ಕಾಲದಿಂದ, ಕವಿರಾಜ ಮಾರ್ಗದಿಂದ ಪಂಪ, ರನ್ನ, ಲಕ್ಷ್ಮೀಶ, ಚಾಮರಸ ಇವರೆಲ್ಲರೂ ನಮ್ಮ ಉತ್ತರ ಕರ್ನಾಟಕದವರು. ಗಂಡುಗಲಿ ಕುಮಾರ ರಾಮ ನಮ್ಮ ಭಾಗದವರು. ಈ ಭಾಗಕ್ಕೆ ಒಳ್ಳೆಯ ಸಂಸ್ಕೃತಿಯ ಶ್ರೀಮಂತಿಕೆಯಿದೆ.

ಮಾತನಾಡುವ ಭಾಷೆ ಮತ್ತು ಗ್ರಾಮೀಣ ಭಾಷೆಗೆ ವ್ಯತ್ಯಾಸವಿದೆ. ನಮ್ಮ ಭಾಗದ ಅನುಭವ ಮಂಟಪ ಇಂದಿನ ಸಂಸತ್ತಿನ ಪ್ರತೀಕವಾಗಿದೆ.

ಶಿಕ್ಷಣ ತಜ್ಞ ಬಿ.ಜಿ. ಕರಿಗಾರ ಮಾತನಾಡಿ, ಸರಕಾರ ಬಹಳ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದೆ. ಇದರ ಜೊತೆಗೆ ನಾವು ಕೂಡ ಕೈಜೋಡಿಸಬೇಕು. ಎಲ್ಲರೂ ಉನ್ನತ ಶಿಕ್ಷಣ ಪಡೆಯಬೇಕು. ಸ್ವಚ್ಛತೆಯ ಕುರಿತು ಜನರಿಗೆ ಅರಿವು ಮೂಡಿಸಬೇಕು ಎಂದರು.

ನಮ್ಮ ಹಳ್ಳಿಗಳ ಸ್ಥಿತಿ ಬಹಳ ಕಷ್ಟವಿದೆ. ಜನಪ್ರತಿನಿದಿಗಳು ಮನಸ್ಸು ಮಾಡಿದರೆ ಮತ್ತು ಇಚ್ಛಾಶಕ್ತಿ ಇದ್ದರೆ ಒಳ್ಳೆಯ ಕೆಲಸ ಮಾಡಬಹುದು. ನಾವು ಜನರ ಜೊತೆ ಬೇರೆಯಬೇಕು. ಜನರು ಸಮಸ್ಯೆಗಳನ್ನು ಅರ್ಥ ಮಾಡಿಕೊಳ್ಳಬೇಕು. ಎಲ್ಲರೂ ಸರಳ ಜೀವನ ನಡೆಸಬೇಕು ಎಂದರು.

ಲೇಬಗೇರಿ ಗ್ರಾ.ಪಂ ಸದಸ್ಯ ಫಾಕಿರಗೌಡ ಮಾತನಾಡುತ್ತ, ವಿದ್ಯಾರ್ಥಿಗಳಾದ ನೀವು ನಿಮ್ಮ ತಂದೆ-ತಾಯಿಗಳ ಕಷ್ಟಗಳನ್ನು ಅರ್ಥ ಮಾಡಿಕೊಂಡು ಓದಬೇಕು. ನೀವು ದಿಟ್ಟ ಮಹಿಳೆಯರಾಗಬೇಕು. ಪ್ರತಿಯೊಬ್ಬರೂ ಮನಸ್ಸಿನಲ್ಲಿ ಒಳ್ಳೆಯ ಆಲೋಚನೆಗಳನ್ನು ಇಟ್ಟುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಮಾತನಾಡುತ್ತ, ಗ್ರಾಮಗಳಲ್ಲಿ ಎನ್.ಎಸ್.ಎಸ್ ಶಿಬಿರಗಳ ಮೂಲಕ ಜನರಲ್ಲಿ ಸ್ವಚ್ಛತೆಯ ಅರಿವು ಬರುತ್ತದೆ. ಇಂತಹ ಶಿಬಿರಗಳ ಮೂಲಕ ಪ್ರಾಯೋಗಿಕ ಜ್ಞಾನ ಪಡೆದುಕೊಳ್ಳಬೇಕು. ಸಹಕಾರದ ಮೂಲವೇ ಹಳ್ಳಿಗಳು. ಹಳ್ಳಿಗಳು ತಮಗೆ ಏನು ಬೇಕೋ ಅದನ್ನು ತಾವೇ ಪಡೆದುಕೊಳ್ಳುತ್ತವೆ ಎಂದರು.

ಹಂಪಮ್ಮ ಸ್ವಾಗತಿಸಿದರು. ವಿಜಯಲಕ್ಷ್ಮೀ ನಿರೂಪಿಸಿದರು.

## ಭಾರತವನ್ನು ಗುರಿಯಾಗಿಸಲು ಪಾಕಿಸ್ತಾನದಿಂದ 300-400 ಡ್ರೋನ್‌ಗಳ ಬಳಕೆ: ಕರ್ನಲ್ ಸೋಫಿಯಾ ಖುರೇಷಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತದ 36 ಸ್ಥಳಗಳ ಮೇಲೆ ಟರ್ಕಿ ಡ್ರೋನ್ ಮೂಲಕ ದಾಳಿ ನಡೆಸಲು ಪಾಕಿಸ್ತಾನ ಪ್ರಯತ್ನಿಸಿದೆ. 300-400 ಡ್ರೋನ್‌ಗಳ ಸಮೂಹವು ಲೇಹ್‌ನಿಂದ ಸರ್ ಕ್ರೀಕ್‌ವರೆಗಿನ ಭಾರತೀಯ ಸ್ಥಳಗಳನ್ನು ಗುರಿಯಾಗಿಸಿದೆ. ಪಾಕಿಸ್ತಾನ ನಾಗರಿಕ ವಿಮಾನಯಾನ ಸಂಸ್ಥೆಗಳನ್ನು ಗುರಾಣಿಯಾಗಿ ಬಳಸಿದೆ ಎಂದು ಕರ್ನಲ್ ಸೋಫಿಯಾ ಖುರೇಷಿ ಹೇಳಿದರು.

ಗುರುವಾರ (ಮೇ.8) ರಾತ್ರಿ ಭಾರತ ಮತ್ತು ಪಾಕಿಸ್ತಾನ ನಡುವೆ ಸಂಘರ್ಷ ಏರ್ಪಟ್ಟ ಬಗ್ಗೆ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಕರ್ನಲ್ ಸೋಫಿಯಾ ಖುರೇಷಿ ಮತ್ತು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಶುಕ್ರವಾರ



(ಮೇ.9) ಜಂಟಿ ಸುದ್ದಿಗೋಷ್ಠಿ ನಡೆಸಿ ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಗುರುವಾರ ತಡರಾತ್ರಿ ಭಾರತದ ಉತ್ತರ ಮತ್ತು ಪಶ್ಚಿಮ ವಲಯಗಳಲ್ಲಿನ 15 ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಉಡಾಯಿಸಿದೆ ಎಂದು ಸೋಫಿಯಾ ಖುರೇಷಿ ತಿಳಿಸಿದರು. "ನಮ್ಮ ಸಶಸ್ತ್ರ ಪಡೆಗಳು ಚಲನಶೀಲ ಮತ್ತು ಚಲನಶೀಲವಲ್ಲದ ವಿಧಾನಗಳನ್ನು ಬಳಸಿಕೊಂಡು ಅನೇಕ ಪಾಕಿಸ್ತಾನಿ ಡ್ರೋನ್‌ಗಳನ್ನು ಹೊಡೆದುರುಳಿಸಿವೆ. ಭಟಿಂಡಾ ಮಿಲಿಟರಿ ನೆಲೆಯನ್ನು ಗುರಿಯಾಗಿಸಲು ಕಳುಹಿಸಲಾದ ಒಂದು ಪಾಕಿಸ್ತಾನಿ ಸಶಸ್ತ್ರ ಮಾನವರಹಿತ ವೈಮಾನಿಕ ವಾಹನದ ಪ್ರಯತ್ನವನ್ನು ವಿಫಲಗೊಳಿಸಿವೆ ಎಂದು ಹೇಳಿದರು.

## ಉಚಿತ ವೃತ್ತಿಪರ ತರಬೇತಿಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಬಿ.ಐ ಆರ್‌ಸೆಟಿ ಹುಲಕೋಟಿ–ಗದಗ ಗಿಟ್‌ಸರ್ಡ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ–ಗದಗ ಮತ್ತು ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ, ಇವುಗಳ ಸಂಯುಕ್ತ ಆಶ್ರಯದಲ್ಲಿ ಊಟ–ವಸತಿಯೊದಿಗೆ ಉಚಿತ ಕಂಪ್ಯೂಟರ್, ಡಿ.ಟಿ.ಪಿ, ಮಹಿಳೆಯರ ಹೊಲಿಗೆ ತರಬೇತಿ, ಮಹಿಳೆಯರ ಬ್ಯೂಟಿ ಪಾರ್ಲರ್ ತರಬೇತಿಗಳನ್ನು ಜೂನ್ ತಿಂಗಳಲ್ಲಿ ಆರಂಭಿಸಲಾಗುತ್ತಿದೆ.

ಆಸಕ್ತರು, ನಿರುದ್ಯೋಗಿಗಳು, ಯುವಕ–ಯುವತಿಯರು, ಪುರುಷರು, ಮಹಿಳೆಯರು, ಸ್ವ–ಸಹಾಯ ಗುಂಪಿನವರು ಮತ್ತು 19ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದವರಿಂದ ಅರ್ಜಿ ಆಹ್ವಾನಿಸಿದೆ. ಈ ತರಬೇತಿಗಳು ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ. ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣಪತ್ರ ನೀಡಲಾಗುವುದು.

ತರಬೇತಿ ಪಡೆದವರಿಗೆ ಬ್ಯಾಂಕ್ ಸಾಲ ಮಾಡಿಸಿಕೊಡಲಾಗುವುದು. ಆಸಕ್ತರು ಎಸ್.ಬಿ.ಐ ಆರ್‌ಸೆಟಿ ಹುಲಕೋಟಿ ಗದಗ ಸಂಸ್ಥೆಯಲ್ಲಿ ದೊರೆಯುವ ಅರ್ಜಿ ಫಾರಂ ತುಂಬಿ, ನಿರ್ದೇಶಕರು, ಎಸ್.ಬಿ.ಐ ಆರ್‌ಸೆಟಿ ಹುಲಕೋಟಿ–ಗದಗ, ಆರ್‌ಸೆಟಿ ಸಂಸ್ಥೆ ಹುಲಕೋಟಿ–ಗದಗ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ ಗದಗ ಇವರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ–8880169996, 9632287949 ಸಂಪರ್ಕಿಸಲು ಕೋರಲಾಗಿದೆ ಎಂದು ಆರ್‌ಸೆಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹೊಸ ಬದುಕಿನ ಭರವಸೆ, ಪ್ರೀತಿ ಜೊತೆಗೆ ಕಾಳಜಿ ನೀಡಿದ ನರೇಗಾ ಕಾಮಗಾರಿ

## ಅಂಗವೈಕಲ್ಯಕ್ಕೆ ನರೇಗಾ ಊರುಗೋಲು

■ವಿಜಯಸಾಕ್ಷಿ ಸುದ್ದಿ, ಗದಗ

ದೈಹಿಕ ನ್ಯೂನ್ಯತೆ ಇರುವವರನ್ನು ತುಚ್ಛವಾಗಿ ಕಾಣುವುದೇ ಹೆಚ್ಚು. ಅವರಿಂದ ಏನೂ ಮಾಡಲು ಸಾಧ್ಯವಿಲ್ಲ ಎನ್ನುವುದು ಹಲವರ ಊಹೆ. ಆದರೆ ತಾವು ಕೂಡ ದುಡಿದು ಸ್ವಾವಲಂಬಿಗಳಾಗಬಹುದು ಎನ್ನುವುದಕ್ಕೆ ಈ ವಿಶೇಷ ಚೇತನ ದಂಪತಿಗಳು ಸಾಕ್ಷಿಯಾಗಿದ್ದಾರೆ.

ಗದಗ ತಾಲೂಕಿನ ನಾಗಾವಿ ಗ್ರಾಮದಲ್ಲಿ ನರೇಗಾದಡಿ ಮೂರು ವಾರಗಳಿಂದ ಬದು ನಿರ್ಮಾಣ ಕೆಲಸ ನೀಡಲಾಗಿದೆ. ಗ್ರಾಮದ ಅಂಗವಿಕಲ ದಂಪತಿಗಳಾದ ಹುಲಗೆಪ್ಪ ಸುಬ್ಬಪ್ಪ ಚಲವಾದಿ ಮತ್ತು ಶಾಂತವ್ವ ಹುಲಗೆಪ್ಪ ಚಲವಾದಿ ಅವರು ಮೂರು–ನಾಲ್ಕು ವರ್ಷಗಳಿಂದ ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಹುಲಗೆಪ್ಪ ಅವರಿಗೆ ಒಂದು ಕಣ್ಣು ಸರಿಯಾಗಿ ಕಾಣುವುದಿಲ್ಲ.

ಅವರ ಪತ್ನಿ ಶಾಂತವ್ವ ಅವರದು ಒಂದು ಕೈ ಅಶಕ್ತವಾಗಿದೆ. ಹೀಗಿದ್ದರೂ ದುಡಿಯುವ ಉತ್ಸಾಹ ದಂಪತಿಗಳಲ್ಲಿ



ಕಡಿಮೆಯಾಗಿಲ್ಲ.

ದಂಪತಿಗೆ ಮೂವರು ಮಕ್ಕಳು. ಅವರಲ್ಲಿ ಇಬ್ಬರು ಹೆಣ್ಣು ಮಕ್ಕಳಿಗೆ ಮದುವೆಯಾಗಿದೆ. ಓರ್ವ ಮಗ ನಿತ್ಯ ದುಡಿಮೆಗೆ ಗಾರೆ ಕೆಲಸ ಮಾಡುತ್ತಾರೆ. ತುಂಬು ಕುಟುಂಬದಲ್ಲಿ ವಾಸವಾಗಿರುವ ದಂಪತಿಗಳಿಗೆ ಯಾವುದೇ ಜಮೀನು, ಆಸ್ತಿ ಇಲ್ಲ. ಊರಿನಲ್ಲಿ ವಾಸಿಸಲು ಸ್ವಂತ ಮನೆ ಇದೆ. ಮನೆಯ ಖರ್ಚು ವೆಚ್ಚಕ್ಕೆ ಸಹಾಯವಾಗಲಿ ಎಂಬ ಉದ್ದೇಶದಿಂದ ಉದ್ಯೋಗ ಖಾತ್ರಿಯಲ್ಲಿ ಪ್ರಸಕ್ತ ವರ್ಷ ಮೂರು ವಾರಗಳಿಂದ ಕೆಲಸ ಮಾಡುತ್ತಿದ್ದಾರೆ. ಉದ್ಯೋಗ ಖಾತ್ರಿಯಲ್ಲಿ ಯಾವುದೇ ತಾರತಮ್ಯವಿಲ್ಲದೆ ಕೆಲಸ ಒದಗಿಸುತ್ತಿರುವ ಬಗ್ಗೆ ಹೆಮ್ಮೆ ವ್ಯಕ್ತಪಡಿಸುತ್ತಾರೆ.ಉದ್ಯೋಗ ಖಾತ್ರಿ ಕೆಲಸದಲ್ಲಿ ದೈಹಿಕ ನ್ಯೂನ್ಯತೆ ಎದುರಿಸುತ್ತಿರುವ ಅಂಧರು, ಕೈ ಇಲ್ಲದವರು, ಮೂಗರು, ಕಿವುಡರು ಹೀಗೆ ಕಷ್ಟದ ಬದುಕು ಸವೆಸುತ್ತಿರುವ ವಿಕಲಚೇತನರು ತಾಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ನರೇಗಾದಡಿ ಕೆಲಸ ಮಾಡುತ್ತಿದ್ದಾರೆ. ತಿಂಗಳ ಮಾಸಾಶನದಲ್ಲೇ ಜೀವನ ನಡೆಸುತ್ತಿದ್ದ ಇವರಿಗೆ ಈಗ ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆ ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳಲು ನೆರವಾಗಿದೆ.

ಇದೇ ರೀತಿ ಹಲವು ಮಂದಿಗೆ ಆಯಾ ಗ್ರಾಮಸ್ಥರು, ಪಂಚಾಯಿತಿಯವರು ಆಸಕ್ತಿ ವಹಿಸಿ ಕೆಲಸ ಒದಗಿಸುತ್ತಿರುವುದು ವಿಕಲಚೇತನರ ಸಂತಸ ಜೀವನಕ್ಕೆ ಅನುಕೂಲವಾಗಿದೆ.

ನಾನು ವಿಕಲಾಂಗನಾಗಿ ಹುಟ್ಟಿದ್ದೇ ತಪ್ಪಾಯ್ತಾ ಎಂಬ ಭಾವ ಮೂಡಿದವರಿಗೆ ನರೇಗಾ ಯೋಜನೆ ಹೊಸ ಬದುಕಿನ ಭರವಸೆ, ಪ್ರೀತಿ ಜೊತೆಗೆ ಕಾಳಜಿ ನೀಡಿದೆ. ನರೇಗಾ ಯೋಜನೆಯೂ ನಮಗೆ ಕೆಲಸ ಹಾಗೂ ಹೆಚ್ಚಿನ ಕೂಲಿ ನೀಡುವುದರ ಜೊತೆಗೆ ನೆಮ್ಮದಿಯೂ ನೀಡುತ್ತಿದೆ ಎಂದು ಹುಲಗೆಪ್ಪ ಚಲವಾದಿ ಖುಷಿ ವ್ಯಕ್ತಪಡಿಸುತ್ತಾರೆ.

> ಬೇಸಿಗೆ ಅವಧಿಯಲ್ಲಿ 'ದುಡಿಯೋಣ ಬಾ' ಅಭಿಯಾನದಡಿ ನಿರಂತರ ನರೇಗಾ ಕೆಲಸ ನೀಡುತ್ತಿರುವುದರಿಂದ ವಿಕಲಚೇತನರಿಗೆ ಇದ್ದೂರಲ್ಲೇ ಕೆಲಸ ಸಿಗುತ್ತಿದೆ. ನರೇಗಾ ಕೂಲಿ ದಿನಕ್ಕೆ 370 ರೂ.ಗೆ ಹೆಚ್ಚಿಸಿದ್ದರಿಂದ ಅಂಗವಿಕಲರು ಖುಷಿಯಿಂದ ನರೇಗಾ ಕೆಲಸ ಮಾಡುತ್ತಾ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ.
>
> **– ಮಲ್ಲಯ್ಯ ಕೊರವನವರ.**
> ಕಾರ್ಯನಿರ್ವಾಹಕ ಅಧಿಕಾರಿಗಳು,
> ತಾ.ಪಂ, ಗದಗ.

## ಸೈನಿಕರ ಶ್ರೇಯಸ್ಸಿಗಾಗಿ ವಿಶೇಷ ಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಉಗ್ರರ ನೆಲೆಗಳ ಮೇಲೆ ಭಾರತೀಯ ಸೈನಿಕರ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಾರ್ಟಿ ಗದಗ ವತಿಯಿಂದ ನಗರದ ಕಿಲ್ಲಾ ಓಣಿಯಲ್ಲಿರುವ ಜೋಡ ಮಾರುತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಯಶಸ್ವಿ ಕಾರ್ಯಾಚರಣೆ ನಡೆಸಿದ ಭಾರತೀಯ ಸೇನೆಯನ್ನು ದೇಶದಾದ್ಯಂತ ಅಭಿನಂದಿಸಲಾಗುತ್ತಿದೆ. ಪಹಲಗಾಂನಲ್ಲಿ ಅಮಾಯಕರ ಹತ್ಯೆ ಖಂಡಿಸಿ ಅದರ ಪ್ರತೀಕಾರಕ್ಕಾಗಿ ಪಾಕಿಸ್ತಾನದ ಉಗ್ರ ನೆಲೆಗಳ ಮೇಲೆ ದಾಳಿ ಮಾಡಿ ಯಶಸ್ಸು ಕಂಡಿರುವ ನಮ್ಮ ಸೈನಿಕರಿಗೆ, ಹೆಮ್ಮೆಯ ಪ್ರಧಾನಿ



ನರೇಂದ್ರ ಮೋದಿಯವರ ಯಶಸ್ಸು, ಆರೋಗ್ಯ, ಆಯುಷ್ಯ ಹೆಚ್ಚಲಿ ಎಂದು ವಿಶೇಷ ಪೂಜೆ ಹಾಗೂ ಅಭಿಷೇಕ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಇನ್ನೊಮ್ಮೆ ಭಾರತ ದೇಶದ ತಂಟೆಗೆ ಬಂದರೆ ಸೇನೆಯ ನಿರ್ಣಯ ಇದಕ್ಕಿಂತ ಕಠೋರವಾಗಿರುತ್ತದೆ ಎಂಬುದನ್ನು ತೋರಿಸಿಕೊಟ್ಟ ನಮ್ಮ ಹೆಮ್ಮೆಯ ಸೈನಿಕರಿಗೆ ಹಾಗೂ ದೇಶದ ಪ್ರಧಾನಿ ನರೇಂದ್ರ ಮೋದಿಯವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು. ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಮಾತನಾಡಿದರು. ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ ಸ್ವಾಗತಿಸಿ ವಂದಿಸಿದರು. ಈ ಸಂದರ್ಭದಲ್ಲಿ ಹಿರಿಯರಾದ ಎಂ.ಎಸ್. ಕರಿಗೌಡ್ರ, ಶ್ರೀಪತಿ ಉಡುಪಿ, ಜಗನ್ನಾಥಸಾ ಭಾಂಡಗೆ, ನಗರಸಭಾ ಸದಸ್ಯರುಗಳಾದ ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ಶಶಿಧರ ದಿಂಡೂರ, ನಾಗರಾಜ ತಳವಾರ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಪ್ರಮುಖರಾದ ಕೆ.ಪಿ. ಕೋಟಿಗೌಡ್ರ, ಸುಧೀರ ಕಾಟಿಗರ, ಸಂಗನಾಳ ವಕೀಲರು, ರಾಚಯ್ಯ ಹೊಸಮಠ, ಮಂಜುನಾಥ ಶಾಂತಗೇರಿ, ಪಂಚಾಕ್ಷರಿ ಅಂಗಡಿ, ರವಿ ಮಾನ್ವಿ, ರಮೇಶ ಹತ್ತಿಕಾಳ, ಬಸವರಾಜ ಮಡಿವಾಳರ, ಬಸವರಾಜ ನರೆಗಲ್, ವಿನಾಯಕ ಹೊರಕೇರಿ, ರವಿ ಚವ್ಹಾಣ, ರಾಜು ಕಾಟಿಗರ, ನಾರಾಯಣ ಸಿಖಾಂದರ, ಸುನೀಲ ಬೇವಿನಕಟ್ಟಿ ಮುಂತಾದವರಿದ್ದರು.

## ಮಸೀದಿಗಳಲ್ಲಿ ವಿಶೇಷ ಪೂಜೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಾಕಿಸ್ತಾನದ ಉಗ್ರರನ್ನು ಸದೆಬಡಿಯಲು ಸನ್ನದ್ಧರಾಗಿರುವ ಮತ್ತು ದೇಶ ರಕ್ಷಣೆಯಲ್ಲಿ ತೊಡಗಿರುವ ಭಾರತದ ಯೋಧರಿಗೆ ಜಯ ಸಿಗಲಿ, ಭಾರತಮಾತೆ ವೀರಯೋಧರ ರಕ್ಷಣೆ ಮಾಡಲು ಹಾಗೂ ಉಗ್ರವಾದ ಸರ್ವನಾಶವಾಗಲಿ ಎಂದು ಪ್ರಾರ್ಥಿಸಿ ಪಟ್ಟಣದ ವಿವಿಧ ಮಸೀದಿಗಳಲ್ಲಿ ಶುಕ್ರವಾರ ಮುಸ್ಲಿಂ ಬಾಂಧವರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಪ್ರಾರ್ಥನೆಯ ನಂತರ ಪಟ್ಟಣದ ಪೀರಂಕಳ್ಳಿ ಮಸೀದಿಯಿಂದ ವೀರ ಕನ್ನಡಿಗ ಟಿಪ್ಪು ಸೇನೆಯ ಸದಸ್ಯರು ಮೆರವಣಿಗೆ ಸಂಘಟಿಸಿದ್ದರು. ಹತ್ತಾರು ಮುಸ್ಲಿಂ ಸಹೋದರರು ಕೈಯಲ್ಲಿ ತಿರಂಗಾ ಧ್ವಜ ಹಿಡಿದು ಘೋಷಣೆಗಳನ್ನು ಕೂಗುತ್ತ ದೂದಪೀರಾಂ ದರ್ಗಾದಲ್ಲಿ ಗದ್ದುಗೆಗೆ ಚಾದರ ಹೊದೆಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮೌಲಾನಾ ಉಸ್ಮಾನ್ ಹಸ್ರಪಿ, ಹಾಪೀಜ್ ಸಾದಿಕ್, ಮೌಲ್ವಾನ ಖಯೂಮ್, ಮೌಲಾನಾ ಪಾರೂಕ್, ಮುನ್ನಾ ಹಜರತ, ಜಾಕೀರ್ಹುಸೇನ್ ಹವಾಲ್ದಾರ, ಹಜರತ್ ಪಟೇಲ್ ಕನಕವಾಡ, ಮಹಮ್ಮದಲೀ ಕಾರಡಗಿ, ಖ್ವಾಜಾಪೀರ್ ಜಮಖಂಡಿ, ಅಂಜುಮನ್ ಇಸ್ಲಾಂ ಸಮಿತಿ ಅಧ್ಯಕ್ಷ ಎಂ.ಎಂ. ಗದಗ, ಶಫೀಕ್ ಸಿದ್ದಾಪುರ ಸೇರಿದಂತೆ ಮತ್ತಿತರರು ಇದ್ದರು. ಪಟ್ಟಣದ ಎಲ್ಲ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು.

## ಸನ್ಮಾರ್ಗ ಕಾಲೇಜಿನ ಪ್ರತಿಭೆಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ಶೈಕ್ಷಣಿಕ ವಲಯದಲ್ಲಿ ತನ್ನದೇ ಆದ ಸಾಧನೆಯನ್ನು ಮಾಡುತ್ತಾ ಬಂದಿರುವ ಸ್ಟುಡೆಂಟ್ ಎಜ್ಯುಕೇಶನ್ ಸಂಸ್ಥೆಯ ಸನ್ಮಾರ್ಗ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾಲಯದ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ನೇಹಾ ವಿ.ಸೊರಟೂರ ಶೇ. 96.5 ಅಂಕಗಳನ್ನು ಗಳಿಸಿ ಕಾಲೇಜಿಗೆ ದ್ವಿತೀಯ ಸ್ಥಾನವನ್ನು ಪಡೆದಿದ್ದಾಳೆ.

ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರು ಹಾಗೂ ಸಿಬ್ಬಂದಿಗಳು ನೇಹಾಳ ಸ್ವಗೃಹದಲ್ಲಿ ಅಭಿನಂದನೆಗಳನ್ನು ತಿಳಿಸಿ, ಸನ್ಮಾನಿಸಿದರು. ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ರೋಹಿತ್ ಒಡೆಯರ್, ರಾಹುಲ್ ಒಡೆಯರ್, ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ಪ್ರೊ. ಶಿವಕುಮಾರ ವಜ್ರಬಂಡಿ, ಪ್ರೊ. ಡಿ.ಬಿ. ಕುಲಕರ್ಣಿ, ಪ್ರೊ. ಪರಶುರಾಮ ಕೊಟ್ನಿಕಲ್, ಪ್ರೊ. ಸಂಗೀತಾ ಬೀಳಗಿ ಉಪಸ್ಥಿತರಿದ್ದು ವಿದ್ಯಾರ್ಥಿಯ ಭವಿಷ್ಯಉಜ್ವಲವಾಗಲಿ ಎಂದು ಆಶಿಸಿದರು.

### ಮೌಲಾನಾ ಆಜಾದ ಮಾದರಿ ಶಾಲೆಗಳಲ್ಲಿ ಉಪನ್ಯಾಸಕ ಹುದ್ದೆ

## ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೌಲಾನಾ ಆಜಾದ ಮಾದರಿ ಶಾಲೆಗಳು (ಗದಗ, ಮುಂಡರಗಿ, ಶಿರಹಟ್ಟಿ, ಗಜೇಂದ್ರಗಡ, ನರಗುಂದ ಹಾಗೂ ಲಕ್ಷ್ಮೇಶ್ವರ) ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ (ಗದಗ, ಮುಂಡರಗಿ ಮತ್ತು ರೋಣ) ಕನ್ನಡ, ಇಂಗ್ಲೀಷ್, ಉರ್ದು, ಸಾಮಾನ್ಯ ವಿಜ್ಞಾನ, ಗಣಿತ, ಹಾಗೂ ಸಮಾಜ ವಿಜ್ಞಾನ ವಿಷಯಗಳನ್ನು ಬೋಧಿಸಲು ತಾತ್ಕಾಲಿಕ ಅತಿಥಿ ಶಿಕ್ಷಕರು ಹಾಗೂ ಕನ್ನಡ, ಇಂಗ್ಲೀಷ್, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಹಾಗೂ ಜೀವಶಾಸ್ತ್ರ ವಿಷಯಗಳನ್ನು ಬೋಧಿಸಲು



ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯಗಳಲ್ಲಿ ಬಿ.ಎಡ್ ಪದವಿ, ಸ್ನಾತಕೋತ್ತರ ಪದವಿಯೊಂದಿಗೆ ಬಿ.ಎಡ್ ಪದವಿಯನ್ನು ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು https://dom.karnataka.gov.in ವೆಬ್‌ಸೈಟ್ ಮೂಲಕ ಅರ್ಜಿಗಳನ್ನು ಪಡೆದು ಈ ಕೆಳಕಂಡ ಕಛೇರಿಗಳಿಗೆ ಮೇ 19ರೊಳಗಾಗಿ ಸಲ್ಲಿಸಬಹುದಾಗಿದೆ.

ತಾಲೂಕಾ ಮಾಹಿತಿ ಕೇಂದ್ರ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ. ದೂ–08372–297494, ತಾಲೂಕಾ ಮಾಹಿತಿ ಕೇಂದ್ರ ತಾಲೂಕ ಪಂಚಾಯಿತಿ ಆವರಣ, ಮುಂಡರಗಿ. ದೂ–08371–262911, ತಾಲೂಕಾ ಮಾಹಿತಿ ಕೇಂದ್ರ, ತಾಲೂಕ ಪಂಚಾಯಿತಿ ಆವರಣ, ರೋಣ. ದೂ–08381–267258, ತಾಲೂಕಾ ಮಾಹಿತಿ ಕೇಂದ್ರ, ತಹಸೀಲ್ದಾರ ಕಾರ್ಯಾಲಯ ರೂಂ ನಂ 20, ನರಗುಂದ. ದೂ–08377–245411, ತಾಲೂಕಾ ಮಾಹಿತಿ ಕೇಂದ್ರ, ತಾಲೂಕಾ ಉಪ ಖಜಾನೆ ಆವರಣ, ಶಿರಹಟ್ಟಿ. ದೂ–08487–242810.

ಹೆಚ್ಚಿನ ಮಾಹಿತಿಗಾಗಿ ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ ಮಾದರಿ ಶಾಲೆ, ಗದಗ ಮೊ–9632268078, ಮೌಲಾನಾ ಆಜಾದ ಮಾದರಿ ಶಾಲೆ, ಮುಂಡರಗಿ ಮೊ–9844288513, ಮೌಲಾನಾ ಆಜಾದ ಮಾದರಿ ಶಾಲೆ, ಲಕ್ಷ್ಮೇಶ್ವರ ಮೊ–9844772602, ಮೌಲಾನಾ ಆಜಾದ ಮಾದರಿ ಶಾಲೆ, ಶಿರಹಟ್ಟಿ ಮೊ–8747092789 ಮೌಲಾನಾ ಆಜಾದ ಮಾದರಿ ಶಾಲೆ, ಗಜೇಂದ್ರಗಡ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ ರೋಣ ಮೊ–9591705861 ಮೊರಾರ್ಜಿ ದೇಸಾಯಿ ವಸತಿ ಶಾಲೆ, ಗದಗ ಹಾಗೂ ಮೌಲಾನಾ ಆಜಾದ ಮಾದರಿ ಶಾಲೆ, ನರಗುಂದ ಮೊ:9742321966 ಮೊರಾರ್ಜಿದೇಸಾಯಿ ವಸತಿಶಾಲೆ ಮಲ್ಲಸಮುದ್ರ ಮೊ: 8861332782 ಮೊರಾರ್ಜಿದೇಸಾಯಿ ವಸತಿಶಾಲೆ ಮುಂಡರಗಿ ಮೊ–8722390388 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## 'ಪಾಕಿಸ್ತಾನಿ' ಎಂದು ಹೀಯಾಳಿಸಿ ಥಳಿಸಿದ ಪತ್ರಕರ್ತ; ಮನನೊಂದು ಆತ್ಮಹತ್ಯೆಗೆ ಶರಣಾದ ಮುಸ್ಲಿಂ ವ್ಯಕ್ತಿ

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ

ಮಹಾರಾಷ್ಟ್ರದ ಲಾತೂರ್ ಜಿಲ್ಲೆಯಲ್ಲಿ ಮೇ 3 ರಂದು ನಡೆದ ರಸ್ತೆ ಗಲಭೆಯ ಘಟನೆಯ ಸಂದರ್ಭದಲ್ಲಿ 30 ವರ್ಷದ ಮುಸ್ಲಿಂ ವ್ಯಕ್ತಿ ಅಮೀರ್ ಪಠಾಣ್ ಮೇಲೆ ಹಲ್ಲೆ ನಡೆಸಿದ ಆರೋಪ ಹೊತ್ತಿರುವ ಸ್ಥಳೀಯ ಪತ್ರಕರ್ತನಿಗಾಗಿ ಪೊಲೀಸರು ಹುಡುಕಾಟ ಆರಂಭಿಸಿದ್ದಾರೆ.

ಗಲಾಟೆ ಸಂದರ್ಭದಲ್ಲಿ ಪತ್ರಕರ್ತನು ಅಮೀರ್ ಪಠಾಣ್ ಮೇಲೆ ಧರ್ಮಾಧಾರಿತವಾಗಿ ನಿಂದನೆ ಮಾಡಿದ್ದಾನೆ. ನೀನಿ ಪಾಕಿಸ್ತಾನಿಯೋ ಅಥವಾ ಕಾಶ್ಮೀರಿಯೋ" ಎಂದು ಪ್ರಶ್ನಿಸಿದ್ದಾನೆ. ಬಳಿಕ ಪಠಾಣ್ ಮೇಲೆ ದೈಹಿಕವಾಗಿ ಹಲ್ಲೆ ನಡೆಸಿ ಘಟನೆಯನ್ನು ಚಿತ್ರೀಕರಿಸಿದ್ದಾನೆ



ಎಂದು ಆರೋಪಿಸಲಾಗಿದೆ.

ಆನ್‌ಲೈನ್‌ನಲ್ಲಿ ವೀಡಿಯೊ ಪ್ರಸಾರವಾಗಿದ್ದರಿಂದ ಪಠಾಣ ಅವಮಾನಗೊಂಡಿದ್ದು, ಪತ್ರಕರ್ತನ ಬೆದರಿಕೆಗಳಿಂದ ನೊಂದಿದ್ದ ಅವರು ಮರುದಿನ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವರದಿಯಾಗಿದೆ.

ಟೆಲಿಕಾಂ ಕಂಪನಿಯಲ್ಲಿ ಹಿರಿಯ ಕಾರ್ಯನಿರ್ವಾಹಕರಾಗಿ ಕೆಲಸ ಮಾಡುತ್ತಿದ್ದ ಪಠಾಣ್, ಮೇ 4 ರಂದು ತನ್ನ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಆರೋಪಿಸಲಾಗಿದೆ. ಅವರ ಪತ್ನಿ ಸಮ್ರಿನ್ ಪಠಾಣ್ ನೀಡಿದ ದೂರಿನ ನಂತರ ಮೇ 5 ರಂದು ಆತ್ಮಹತ್ಯೆಗೆ ಪ್ರಚೋದನೆ ನೀಡಿದ ಔಪಚಾರಿಕ ಪ್ರಕರಣವನ್ನು ದಾಖಲಿಸಲಾಗಿದೆ. ಡಿಜಿಟಲ್ ಸುದ್ದಿ ವೇದಿಕೆಯೊಂದಿಗೆ ಸಂಬಂಧ ಹೊಂದಿರುವ ಪತ್ರಕರ್ತ ಎಂದು ಗುರುತಿಸಲಾದ ಆರೋಪಿ ಪ್ರಸ್ತುತ ತಲೆಮರೆಸಿಕೊಂಡಿದ್ದಾನೆ. ಎಂಐಸಿಡಿ ಲಾತೂರ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ಪ್ರಕಾರ, ಈ ಘಟನೆ ಮೇ 3 ರ ರಾತ್ರಿ ನಡೆದಿದೆ.

ಧಾರಾಶಿವ್ ಜಿಲ್ಲೆಯ ಖಾಸಗಿ ಬ್ಯಾಂಕ್‌ನಲ್ಲಿ ಉಪ ವ್ಯವಸ್ಥಾಪಕಿಯಾಗಿ ಸೇವೆ ಸಲ್ಲಿಸುತ್ತಿರುವ 29 ವರ್ಷದ ಸಮ್ರಿನ್, ತನ್ನ ಪತಿಯನ್ನು ಸಂವಿಧಾನ್ ಚೌಕ್‌ನಿಂದ ಕರೆದುಕೊಂಡು ಹೋಗಲು ಎಂದಿನಂತೆ ಕರೆ ಮಾಡಿದ್ದಾಗಿ ಪೊಲೀಸರಿಗೆ ತಿಳಿಸಿದ್ದಾರೆ.

ಕರೆಯ ಸಮಯದಲ್ಲಿ, ತನ್ನ ಪತಿ ಒಬ್ಬ ವ್ಯಕ್ತಿಗೆ ತನಗೆ ನೋವುಂಟು ಮಾಡಬೇಡಿ ಎಂದು ಬೇಡಿಕೊಳ್ಳುವುದು ಹಾಗೂ ತನ್ನ ತಪ್ಪಿಲ್ಲ ಎಂದು ಮನವಿ ಮಾಡುತ್ತಿರುವುದನ್ನು ಕೇಳಿಸಿಕೊಂಡಿದ್ದಾಗಿ ಅವರು ದೂರಿನಲ್ಲಿ ತಿಳಿಸಿದ್ದಾರೆ.

"ಫೋನ್ ಕರೆಯ ಸಮಯದಲ್ಲಿ, ಇನ್ನೊಬ್ಬ ವ್ಯಕ್ತಿ ನನ್ನ ಪತಿಗೆ ತಾನು ಪತ್ರಕರ್ತ ಎಂದು ಹೇಳುವುದನ್ನು ನಾನು ಕೇಳಿಸಿಕೊಂಡೆ. ಅವನು ನನ್ನ ಪತಿ ಕಾಶ್ಮೀರದವನೋ ಅಥವಾ ಪಾಕಿಸ್ತಾನದವನೋ ಎಂದು ಪ್ರಶ್ನಿಸಿದನು. ನಂತರ ಪತಿಗೆ ಪತ್ರಕರ್ತ ಹೊಡೆದಿದ್ದಾನೆ.

ನನ್ನ ಪತಿ ನೋವಿನಿಂದ ಕಿರುಚುವುದನ್ನು ನಾನು ಕೇಳಿದೆ" ಎಂದು ಸಮ್ರಿನ್ ತನ್ನ ದೂರಿನಲ್ಲಿ ತಿಳಿಸಿದ್ದಾರೆ.

ಗಾಬರಿಗೊಂಡ ಸಮ್ರಿನ್ ಸ್ಥಳಕ್ಕೆ ಧಾವಿಸಿ ನೋಡಿದಾಗ ಎಂಎಚ್24 ಬಿಆರ್ 7008 ನೋಂದಣಿ ಸಂಖ್ಯೆಯ ಕಾರನ್ನು ಸ್ಥಳದಲ್ಲಿ ಕಂಡರು. ಅದನ್ನು ದಾಳಿಕೋರ ಬಳಸಿದ್ದಾನೆಂದು ನಂಬಲಾಗಿದೆ. ಆದರೂ, ಆಕೆ ಬರುವ ಹೊತ್ತಿಗೆ, ದಾಳಿಕೋರ ಸ್ಥಳದಿಂದ ಪರಾರಿಯಾಗಿದ್ದ.

ಹಲ್ಲೆಕೋರನು ಹಲ್ಲೆಯ ಚಿತ್ರಗಳು ಮತ್ತು ವೀಡಿಯೊಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಸಮ್ರಿನ್ ತನ್ನ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ನವವಿವಾಹಿತ ದಂಪತಿಯ ಶವಗಳು ಬಾವಿಯಲ್ಲಿ ಪತ್ತೆ!

■ವಿಜಯಸಾಕ್ಷಿ ಸುದ್ದಿ, ಚೆನ್ನೈ

ನವವಿವಾಹಿತ ದಂಪತಿಯ ಶವಗಳು ಬಾವಿಯಲ್ಲಿ ಪತ್ತೆಯಾಗಿರುವ ಘಟನೆ ತಮಿಳುನಾಡಿನಲ್ಲಿ ಜರುಗಿದೆ.

ಪುದುಕೋತುಕಾಡು ಗ್ರಾಮದ ಕಟ್ಟಡ ಕಾರ್ಮಿಕ ಶಕ್ತಿವೇಲ್ ಮತ್ತು ಇಂಡಿಯಾಂಪಾಲಯಂ ನಿವಾಸಿ ಪ್ರಿಯದರ್ಶಿನಿ ಸುಮಾರು ಏಳು ತಿಂಗಳಿಂದ ಪರಸ್ಪರ ಪ್ರೀತಿಸುತ್ತಿದ್ದರು ಮತ್ತು ಅವರ ಕುಟುಂಬಗಳ ಒಪ್ಪಿಗೆಯೊಂದಿಗೆ ವಿವಾಹವಾಗಿದ್ದರು. ಬುಧವಾರ ರಾತ್ರಿ, ದಂಪತಿಗಳು ಸ್ಥಳೀಯ ಗ್ರಾಮ ಉತ್ಸವದಲ್ಲಿ ಭಾಗವಹಿಸಲು ಇಂಡಿಯಾಂಪಾಲಯಂನಲ್ಲಿರುವ ಪ್ರಿಯದರ್ಶಿನಿ ಅವರ ತಾಯಿಯ ಮನೆಗೆ ಹೋಗಿದ್ದರು.

ಮರುದಿನ ಬೆಳಗ್ಗೆ, ಗ್ರಾಮಸ್ಥರು ಹತ್ತಿರದ ಬಾವಿಯಲ್ಲಿ ಅವರ ಶವವನ್ನು ಕಂಡಿದ್ದಾರೆ. ಕೂಡಲೇ ಕಾಡತ್ತೂರು ಪೊಲೀಸರಿಗೆ ಮಾಹಿತಿ ನೀಡಿದರು.

ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ನಂತರ ಶವಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸತ್ಯಮಂಗಲಂನ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka